ಸಂಪುಟ : 11 ಸಂಚಿಕೆ: 06 ಪುಟ : 4+2 ಬೆಲೆ: 3.00 ಶನಿವಾರ ಜನವರಿ 31 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 06 Pages : 4+2 Price : 3.00 Saturday January 31 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮಕ್ಕಳ ಬಾಲ್ಯ ನೆಮ್ಮದಿಯಿಂದ ಕೂಡಿರಲಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಜ. 26ರಿಂದ ಮಾರ್ಚ್ 31ರವರೆಗೆ ನಡೆಯುತ್ತಿರುವ ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಜನಜಾಗೃತಿ ಕಾರ್ಯಕ್ರಮದ ಉದ್ಘಾಟನೆ ಜರುಗಿತು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲಕಾರ್ಮಿಕರಾಗುತ್ತಾರೆ. ಅಲ್ಲದೆ, ಬೇರೆ ಬೇರೆ ಅನೈತಿಕ ಚಟುವಟಿಕೆಗಳಲ್ಲಿ ತೊಡಗುವ ಸಾಧ್ಯತೆ ಇರುತ್ತದೆ. ಬಾಲ ಕಾರ್ಮಿಕರು ಕಂಡುಬರುವ ಕಡೆಗೆ ದಾಳಿ ಮಾಡಿ ಬಾಲಕಾರ್ಮಿಕತೆ ನಿರ್ಮೂಲನೆ ಮಾಡಬೇಕು. ಅಂದಾಗ ಈ ಅಭಿಯಾನವು ಯಶಸ್ವಿಯಾಗುತ್ತದೆ ಎಂದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ದೇವರ ಸಮಾನ. ಮಕ್ಕಳ ಬಾಲ್ಯ ನೆಮ್ಮದಿಯಿಂದ ಕೂಡಿರಬೇಕು. ಬಾಲಕಾರ್ಮಿಕತೆಯನ್ನು ತಡೆಗಟ್ಟಿ ಮಕ್ಕಳ ಉಜ್ವಲ ಭವಿಷ್ಯ ನಿರ್ಮಾಣಕ್ಕಾಗಿ ಅವರಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು. ಈ ಪರಿಕಲ್ಪನೆ ನಮ್ಮಲ್ಲಿ ದೃಢವಾಗಿ ನಿಲ್ಲಬೇಕು ಎನ್ನುವ ಉದ್ದೇಶದಿಂದ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ವಕೀಲರಾದ ಗುರುರಾಜ್ ಗೌರಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ್ ಸೋಮನಕಟ್ಟಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು, ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಸಂದೇಶ ಪಾಟೀಲ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ, ಕಾರ್ಮಿಕ ನಿರೀಕ್ಷಕರು, ಮಕ್ಕಳ ಸಹಾಯವಾಣಿ ಕೋಆರ್ಡಿನೇಟರ್, ಸ್ಪಂದನ ಸ್ವಯಂ ಸೇವಾ ಸಂಸ್ಥೆಯವರು, ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

### ಸಂಸದ ಕ್ರೀಡಾ ಮಹೋತ್ಸವ 2025-26ರ ಕ್ರೀಡಾಕೂಟವನ್ನು ಉದ್ಘಾಟಿಸಿದ ಸಂಸದ ಬಸವರಾಜ ಬೊಮ್ಮಾಯಿ

# ಕ್ರೀಡೆಯಿಂದ ಶಿಸ್ತು, ಚಾರಿತ್ರ್ಯ ವೃದ್ಧಿ



ಕ್ರೀಡೆ ಜೀವನಕ್ಕೆ ಬಹಳ ಹತ್ತಿರ. ಸೋಲಬಾರದು ಎಂದು ಆಡುವುದು ಅಂದರೆ, ಒಂದು ರಕ್ಷಣಾತ್ಮಕ ಆಟ, ಇನ್ನೊಂದು ಗೆಲ್ಲಲೇಬೇಕೆಂದು ಆಡುವುದು ಆಕ್ರಮಣಕಾರಿ ಆಟ. ಬದುಕಿನಲ್ಲಿ ಗೆಲ್ಲಲೇಬೇಕೆಂದು ಆಟ ಆಡಬೇಕು, ಅಂದಾಗ ಮಾತ್ರ ಯಶಸ್ಸು ಸಿಗುತ್ತದೆ. ಸಕಾರಾತ್ಮಕ ಮನಸ್ಸು, ಕಠಿಣ ಪರಿಶ್ರಮ, ಗುರಿ ಇದ್ದರೆ ಯಶಸ್ಸು ಸಾಧ್ಯ ಎಂದು ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಜೀವನದಲ್ಲಿ ಯಾರು ಕ್ರೀಡೆಯನ್ನು ಮುಂದುವರೆಸಿಕೊಂಡು ಹೋಗುತ್ತಾರೆಯೋ ಅವರು ದೈಹಿಕವಾಗಿ, ಮಾನಸಿಕವಾಗಿ ಆರೋಗ್ಯವಾಗಿರುತ್ತಾರೆ. ಅಷ್ಟೇ ಅಲ್ಲ, ಎಂಥಹ ಸಂದರ್ಭದಲ್ಲಿಯೂ ಸುಖ-ದುಃಖವನ್ನು ಸಮನಾಗಿ ಸ್ವೀಕರಿಸುವ ಚೈತನ್ಯ ಕ್ರೀಡಾ ಮನೋಭಾವದಿಂದ ಬರುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಶುಕ್ರವಾರ ಹಾವೇರಿ ಜಿಲ್ಲೆಯ ಹಾನಗಲ್ಲ ನಗರದ ಜನತಾ ಶಿಕ್ಷಣ ಸಂಸ್ಥೆಯ ಕಾಲೇಜು ಮೈದಾನದಲ್ಲಿ ಏರ್ಪಡಿಸಿದ್ದ ಸಂಸದ ಕ್ರೀಡಾ ಮಹೋತ್ಸವ 2025-26ರ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಬಹಳ ಮುಖ್ಯ. ಸಣ್ಣವರಿದ್ದಾಗ ಎಲ್ಲರೂ ಒಂದಿಲ್ಲೊಂದು ಕ್ರೀಡೆಯಲ್ಲಿ ತೊಡಗಿಸಿಕೊಂಡಿರುತ್ತೇವೆ. ಆದರೆ, ಅದನ್ನು ಮುಂದುವರೆಸಿಕೊಂಡು ಹೋಗುವುದಿಲ್ಲ. ಕ್ರೀಡೆಯೊಂದಿಗಿನ ನಂಟು ಜೀವನದ ಅರ್ಧದಲ್ಲಿಯೇ ನಿಂತು ಹೋಗುತ್ತದೆ. ಕ್ರೀಡೆಗೆ ವಯಸ್ಸಿನ ಮಿತಿ ಇಲ್ಲ ಎಂದು ಇಲ್ಲಿಗೆ ಬಂದಾಗಲೇ ಗೊತ್ತಾಯಿತು. ವೈಭವಿ ಮಹಿಳಾ ಮಂಡಳದವರು ಸ್ಫೂರ್ತಿಯಿಂದ, ಬಹಳ ಉತ್ಸಾಹದಿಂದ ಆಡಿದರು. ಮನಸ್ಸಿದ್ದರೆ ಕ್ರೀಡೆಯನ್ನು ಯಾವ ವಯಸ್ಸಿನಲ್ಲಿಯಾದರೂ ಆಡಬಹುದು ಎನ್ನುವುದನ್ನು ತೋರಿಸಿಕೊಟ್ಟಿದ್ದೀರಿ. ಇಡೀ ದಿನ ಎಲ್ಲರೂ ಸಕ್ರಿಯರಾಗಿ ಕ್ರೀಡೆಯಲ್ಲಿ ಪಾಲ್ಗೊಂಡಿದ್ದಾರೆ ಎಂದು ಹೇಳಿದರು.

ಕ್ರೀಡೆಯಿಂದ ಶಿಸ್ತು, ಚಾರಿತ್ರ್ಯ ಬರುತ್ತದೆ. ಅದಕ್ಕೆ ನಮ್ಮ ಪ್ರಧಾನಿ ನರೇಂದ್ರ ಮೋದಿಯವರು ಕ್ರೀಡೆಗೂ ಅಷ್ಟೇ ಮಹತ್ವ ಕೊಟ್ಟಿದ್ದಾರೆ. ಮೊದಲು ಫಿಟ್ ಇಂಡಿಯಾ, ನಂತರ ಖೇಲೋ ಇಂಡಿಯಾ, ಓಲಿಂಪಿಕ್ಸ್ ಬಂದಾಗ ಜೀತೋ ಇಂಡಿಯಾ ಇತ್ಯಾದಿಗಳ ಪರಿಣಾಮದಿಂದ ಟೋಕಿಯೋ ಓಲಿಂಪಿಕ್ಸ್‌ನಲ್ಲಿ ಭಾರತ ಹಿಂದೆಂದಿಗಿಂತಲೂ ಹೆಚ್ಚು ಪದಕಗಳನ್ನು ಗೆಲ್ಲಲು ಸಾಧ್ಯವಾಯಿತು. ಸಂಸದರ ಕ್ರೀಡಾ ಮಹೋತ್ಸವ ಬಹಳ ಯಶಸ್ವಿಯಾಗಿ ಜಿಲ್ಲೆಯಾದ್ಯಂತ ಕ್ರೀಡಾ ಸ್ಫೂರ್ತಿಯನ್ನು ಹುಟ್ಟುಹಾಕಿದೆ. ಮುಂದಿನ ವರ್ಷ ದೊಡ್ಡ ಪ್ರಮಾಣದಲ್ಲಿ ಪ್ರಚಾರ ಕೊಟ್ಟು ಉತ್ತಮ ರೀತಿಯಲ್ಲಿ ನಡೆಸೋಣ ಎಂದು ಹೇಳಿದರು.

ಈ ಕ್ರೀಡೆ ಅತ್ಯಂತ ಯಶಸ್ವಿಯಾಗಲು ಕಾರಣರಾಗಿರುವ ಪಕ್ಷದ ಎಲ್ಲ ಮುಖಂಡರಿಗೆ, ಕ್ರೀಡಾಪಟುಗಳು, ರೆಫ್ರಿಯಾಗಿ ಬಂದಿರುವ ಎಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಈ ಸಂಧರ್ಭದಲ್ಲಿ ಮಾಜಿ ಶಾಸಕರಾದ ಶಿವರಾಜ ಸಜ್ಜನ, ಭಾರತೀಯ ಜನತಾ ಪಕ್ಷದ ಮಂಡಳದ ಅಧ್ಯಕ್ಷರಾದ ಮಹೇಶಕುಮಾರ ಕಮಡೊಳ್ಳಿ, ಮುಖಂಡರುಗಳಾದ ಪದ್ಮನಾಭ ಕುಂದಾಪೂರ, ಬಿ.ಎಸ್. ಅಕ್ಕಿವಳ್ಳಿ, ಭೋಜರಾಜ ಕರೂದಿ, ಕಲ್ಯಾಣಕುಮಾರ ಶೆಟ್ಟರ, ರಾಘವೇಂದ್ರ ತಹಸೀಲ್ದಾರ, ಮಾಲತೇಶ ಸೊಪ್ಪಿನ, ಕೃಷ್ಣಾ ಇಳಿಗೇರ, ರಾಜಶೇಖರಗೌಡ ಕಟ್ಟೆಗೌಡ್ರ, ಚಂದ್ರಪ್ಪ ಹರಿಜನ, ಸಿದ್ದಲಿಂಗಪ್ಪ ಕಮಡೊಳ್ಳಿ, ಶಿವಲಿಂಗಪ್ಪ ತಲ್ಲೂರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

### ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಮಾಹಿತಿ

# ಫೆ. 1ರಂದು ಗದುಗಿನಲ್ಲಿ ಕಾರ್ಯಕಾರಿ ಸಮಿತಿ ಸಭೆ




ಸರ್ಕಾರಿ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಲ್ಲಿ ಆಗುತ್ತಿರುವ ತಾಂತ್ರಿಕ ಸಮಸ್ಯೆಗಳು, ಪ್ರಾಥಮಿಕ ಶಾಲಾ ಶಿಕ್ಷಕರ ಮುಂಬಡ್ತಿ, ಸಿಸಿಆರ್ ನಿಯಮ ಬಗ್ಗೆ ಚರ್ಚಿಸಲಾಗುವುದು. ಅಂದು ಸಂಜೆ 4ಕ್ಕೆ ಸರ್ಕಾರಿ ನೌಕರ ಸಂಘ ಹುಟ್ಟುಹಾಕಿದ ಮೆರಿ ದೇವಾಸಿಯಾ ಹೆಸರಿನಲ್ಲಿ ಗೃಹ ನಿರ್ಮಾಣ ಸಂಘದ ಉದ್ಘಾಟನೆ ಜರುಗಲಿದೆ ಎಂದು ಬಸವರಾಜ ಬಳ್ಳಾರಿ ವಿವರಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಫೆ. 1ರಂದು ಬೆಳಿಗ್ಗೆ 11 ಗಂಟೆಗೆ ನಗರದ ಭೀಮಸೇನ್ ಜೋಶಿ ರಂಗಮಂದಿರದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ತಿಳಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆಯಲ್ಲಿ ಇದೇ ಮೊಟ್ಟ ಮೊದಲ ಬಾರಿಗೆ ರಾಜ್ಯಮಟ್ಟದ ಕಾರ್ಯಕಾರಿ ಸಮಿತಿ ಸಭೆ ನಡೆಯುತ್ತಿದ್ದು, ಪ್ರಮುಖವಾಗಿ ಎನ್‌ಪಿಎಸ್ ಬದಲಾಗಿ ಓಪಿಎಸ್ ಜಾರಿ ಮಾಡುವ ಕುರಿತು ಹೋರಾಟದ ರೂಪುರೇಷೆಗಳನ್ನು ಚರ್ಚಿಸಲಾಗುವುದು ಎಂದರು.

ರಾಜ್ಯ ಘಟಕದ ಕಾರ್ಯಕಾರಿ ಸಭೆಯನ್ನು ಗದುಗಿನಲ್ಲಿ ನಡೆಸಬೇಕು ಎನ್ನುವುದು ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರ ಇಚ್ಛೆಯಾಗಿತ್ತು. ಹೀಗಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಸಭೆಯಲ್ಲಿ ಹಿಂದಿನ ಮಹಾಸಭೆಯ ನಡಾವಳಿಗಳನ್ನು ದಾಖಲಿಸಲಾಗುವುದು.

2025-26ನೇ ಸಾಲಿನ ರಾಜ್ಯ ಮಟ್ಟದ ಕ್ರೀಡಾಕೂಟಗಳ ಆಯೋಜನೆಯ ಬಗ್ಗೆ ಚರ್ಚಿಸಲಾಗುವದು. ನೂತನ ಪಿಂಚಣಿ ಯೋಜನೆ ರದ್ದುಪಡಿಸಿ ಹಳೆ ಪಿಂಚಣಿ ಯೋಜನೆ ಮರುಸ್ಥಾಪಿಸುವ ಸಂಬಂಧ ಸರ್ಕಾರದ ಗಮನ ಸೆಳೆಯಲು ರಾಜ್ಯ ಮಟ್ಟದ ಸಮಾವೇಶ ನಡೆಸುವ ಬಗ್ಗೆ ಚರ್ಚೆ ನಡೆಯುವುದು.

ಸುದ್ದಿಗೋಷ್ಠಿಯಲ್ಲಿ ಡಿ.ಎಸ್. ತಳವಾರ, ಸಿದ್ದಪ್ಪ ಲಿಂಗದಾಳ, ಎಂ.ಎಂ. ನಿಟ್ಟಾಲಿ, ರಾಜು ಕಂಟಿಗೊಣ್ಣವರ, ಮುತ್ತು ಮಲ್ಲಶೆಟ್ಟಿ, ಎ.ಐ ಗಾಡಗೋಳಿ, ಡಿ.ಎಸ್. ದುರ್ಗಣ್ಣವರ, ಕೆ.ಎಫ್. ಹಳ್ಯಾಳ, ಕರೀಂ ಸಾಬಸುಣಗಾರ, ಆರ್.ಎಂ. ನಿಂಬನಾಯ್ಕರ, ಎಂ.ಬಿ. ಗಾಣಗಿ, ಬಿ.ಎಸ್. ಕಮತರ ಇದ್ದರು.

## ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರ ವಿವಿಧ ಇಲಾಖೆಗಳಿಗೆ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ನೀಡಿರುವ ಅನುದಾನವು ಲ್ಯಾಪ್ಸ್ ಆಗದಂತೆ, ಮರುಬಳಕೆ ಆಗದಂತೆ ಸಮರ್ಪಕವಾಗಿ ಬಳಕೆ ಮಾಡಬೇಕೆಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಹೇಳಿದರು. ಅವರು ಶುಕ್ರವಾರ ಶಿರಹಟ್ಟಿಯ ತಾ.ಪಂ ಕಚೇರಿಯಲ್ಲಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎಸ್‌ಸಿಪಿ/ಟಿಎಸ್‌ಪಿ ಅನುದಾನವನ್ನು 50 ಪ್ರತಿಶತಕ್ಕಿಂತ ಹೆಚ್ಚು ಫಲಾನುಭವಿಗಳಿರುವ ಪ್ರದೇಶಗಳಲ್ಲಿ ಬಳಸಬೇಕು. ಒಂದು ವೇಳೆ ನಿಗದಿ ಪಡಿಸಿದ ಪ್ರದೇಶದಲ್ಲಿ 40 ಪ್ರತಿಶತಕ್ಕಿಂತ ಕಡಿಮೆ ಅರ್ಹ ಫಲಾನುಭವಿಗಳು ಇದ್ದರೆ ಅಂತಹ ಪ್ರದೇಶಗಳಲ್ಲಿ ಜನಸಂಖ್ಯೆ ಅನುಸಾರ ಅನುದಾನ ನಿಗದಿಪಡಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಗೆ 28 ಇಲಾಖೆಗಳಲ್ಲಿ 14 ಇಲಾಖೆ ಅಧಿಕಾರಿಗಳು ಮಾತ್ರ ಹಾಜರಿರುವುದು ಹಾಗೂ ಕೆಲವರು ತಮ್ಮ ಸಿಬ್ಬಂದಿಗಳನ್ನು ಕಳುಹಿಸಿರುವದನ್ನು ಗಮನಿಸಿದ ತಾ.ಪಂ ಇಓ ಸಭೆಗೆ ಗೈರು ಉಳಿದ ಇಲಾಖಾಧಿಕಾರಿಗಳಿಗೆ ನೋಟೀಸ್ ನೀಡುವಂತೆ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಗೋಪಾಲ ಲಮಾಣಿ ಅವರಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಗೋಪಾಲ ಲಮಾಣಿ, ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ಬಿಇಓ ಎಚ್.ಎನ್. ನಾಯ್ಕ, ಪಿಆರ್‌ಇಡಿ ಮಲ್ಲಿಕಾರ್ಜುನ ಪಾಟೀಲ, ಡಾ. ಪವನ ಘಾಯದೆ ಮುಂತಾದವರು ಉಪಸ್ಥಿತರಿದ್ದರು.

### ಅನಧಿಕೃತ ಲಾಟರಿ, ಮಟ್ಕಾ ವಿರುದ್ಧ ಕಠಿಣ ಕ್ರಮ; ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಎಚ್ಚರಿಕೆ

## ಮೂವರು ಮಟ್ಕಾ ಆರೋಪಿತರಿಗೆ ಗಡಿಪಾರು ಶಿಕ್ಷೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಅನಧಿಕೃತ ಲಾಟರಿ ಹಾಗೂ ಮಟ್ಕಾ ಪ್ರಕರಣಗಳಲ್ಲಿ ಭಾಗಿಯಾಗುವವರ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ನಡೆದ 2025-26ನೇ ಸಾಲಿನ ತೃತೀಯ ತ್ರೈಮಾಸಿಕ ಪ್ರಿವೆಂಟಿವ್ ಸ್ಕ್ವಾಡ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೂರಕ್ಕಿಂತ ಹೆಚ್ಚು ಬಾರಿ ಮಟ್ಕಾ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿತರಿಗೆ ಯಾವುದೇ ರಿಯಾಯಿತಿ ಇಲ್ಲ. ಮಟ್ಕಾ ಪ್ರಕರಣಗಳಲ್ಲಿ ಪದೇ ಪದೇ ಭಾಗಿಯಾಗಿದ್ದ ಅಬ್ದುಲ್ ರಶೀದ್ ತಂದೆ ಹೈದರಸಾಬ್ ಮುಜಾವರ (53)ಮುಳಗುಂದ, ಫಕ್ಕಿರೇಶ ಯಲ್ಲಪ್ಪ ಹೊಸಕೇರಿ (42)ಶಿರಹಟ್ಟಿ ಹಾಗೂ ಬಸವರಾಜ ತಂದೆ ಮೈಲಪ್ಪ ದೊಡ್ಡಮನಿ (21) ಡಂಬಳ ಇವರನ್ನು ಗದಗ ಜಿಲ್ಲೆಯಿಂದ ಗಡಿಪಾರು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಬಾಕಿ ಉಳಿದಿರುವ ಮಟ್ಕಾ ಪ್ರಕರಣಗಳು ವಿಚಾರಣೆಯ ಹಂತದಲ್ಲಿದ್ದು, ಅವುಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು. ಪೊಲೀಸ್ ಉಪಾಧೀಕ್ಷಕ ಮುರ್ತುಜಾ ಖಾದ್ರಿ ಮಾತನಾಡಿ, ಅಕ್ಟೋಬರ್ 2025ರಿಂದ ಡಿಸೆಂಬರ್ 2025ರವರೆಗೆ ದಾಖಲಾದ ಒಟ್ಟು 44 ಮಟ್ಕಾ ಪ್ರಕರಣಗಳಲ್ಲಿ ದೋಷಾರೋಪಣ ಪತ್ರಗಳನ್ನು ತಯಾರಿಸಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿದ್ದು, 25 ಪ್ರಕರಣಗಳಲ್ಲಿ ಶಿಕ್ಷೆ ವಿಧಿಸಲಾಗಿದೆ. ಉಳಿದ 19 ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿವೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ-ಋಣ ನಿರ್ವಹಣೆ ಇಲಾಖೆ ಸಹಾಯಕ ನಿರ್ದೇಶಕ ಶ್ರೀಧರ ಚಿನಗುಂಡಿ, ವಾಣಿಜ್ಯ ತೆರಿಗೆ ಅಧಿಕಾರಿ (ಜಾರಿ-2) ರಾಜಶೇಖರಯ್ಯ ಕಾಲವಾಡಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಇಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110ಕೆ.ವ್ಹಿ ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಜ. 31ರಂದು 10 ಎಂ.ವಿ.ಎ ಪರಿವರ್ತಕ-2ರ ಮೇಲೆ ಸರ್ಕ್ಯೂಟ್ ಬ್ರೇಕರ್ ತುರ್ತು ದುರಸ್ತಿ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 11 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಸದರಿ ಉಪಕೇಂದ್ರದ ಪರಿವರ್ತಕ-2ರಿಂದ ಪೂರೈಕೆಯಾಗುವ ಎಫ್-6 ಬೆಳ್ಳಟ್ಟಿ, ಎಫ್-7 ಹೊಸೂರು, ಎಫ್-8 ಸುಗ್ನಳ್ಳಿ, ಎಫ್-9 ತಾರಿಕೊಪ್ಪ, ಎಫ್-10 ನೀರು ಸರಬರಾಜು, ಎಫ್-11 ಕೈಗಾರಿಕಾ, ಎಫ್-12 ಹೊಳಲಮ್ಮದೇವಿ, ಎಫ್-4 ದೇವಿಹಾಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ವಿನಂತಿಸಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವಲಯಗಳವಾರು ಸ್ಥಿರ ಬೀದಿ ಬದಿ ವ್ಯಾಪಾರಸ್ಥರಿಗೆ ವ್ಯಕ್ತಿಗತ ಸಂಬಂದಿಸಿದಂತೆ ವಿವಿಧ ಸೌಲಭ್ಯಗಳಾದ ಶಿಕ್ಷಣ 10ನೇ ತರಗತಿಯಿಂದ ಪಿ.ಯು.ಸಿ ವ್ಯಾಸಂಗ ಮಾಡುತ್ತಿರುವವರಿಗೆ, ಪದವಿ ಮತ್ತು ತಾಂತ್ರಿಕ ಶಿಕ್ಷಣ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪಟಾಪ್ ಸೌಲಭ್ಯ (15 ವಿದ್ಯಾರ್ಥಿಗಳಿಗೆ) ; ಬೀದಿ ಬದಿ ವ್ಯಾಪಾರಸ್ಥರಿಗೆ ತುರ್ತು ಆರೋಗ್ಯ ಚಿಕಿತ್ಸೆಗೆ ಮತ್ತು ಅಪಘಾತ ಸಂಭವಿಸಿದ್ದಲ್ಲಿ ಸಹಾಯಧನ ಹಾಗೂ ಬಡ ಬೀದಿ ಬದಿ ವ್ಯಾಪಾರಸ್ಥರು ಮೃತಪಟ್ಟಲ್ಲಿ ಅವರ ಅಂತ್ಯಕ್ರಿಯೆಗೆ ಸಹಾಯಧನ ನೀಡುವುದು ಈ ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಫಲಾನುಭವಿಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಫೆಬ್ರವರಿ 4 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ ಸಂಪರ್ಕಿಸಬಹುದಾಗಿದೆ.

## ಸರ್ವರಿಗೂ ಸಮಬಾಳು, ಸಮಪಾಲು




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ನ್ಯಾಯಾಲಯದ ಆವರಣದಲ್ಲಿನ ಎ.ಡಿ.ಆರ್ ಕಟ್ಟಡದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಗದಗ, ಜಿಲ್ಲಾ ವಕೀಲರ ಸಂಘ ಹಾಗೂ ಡೀಡ್ಸ್ ಮಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅರೆ ಕಾನೂನು ಸ್ವಯಂ ಸೇವಕರಿಗೆ 2ನೇ ದಿನದ ತರಬೇತಿ ಕಾರ್ಯಾಗಾರ ಶುಕ್ರವಾರ ಮುಂದುವರೆಯಿತು.

ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಬಡವರು, ವೃದ್ಧರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು, ಅಂಗವಿಕಲರು, ಅಂಧರು, ವಿಕಲ ಚೇತನರು ಸೌಲಭ್ಯದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು. ಉದಾರಣೆಗೆ ಆಧಾರ್ ಕಾರ್ಡ್, ಕಾರ್ಮಿಕ/ವಿಕಲಚೇತನ ಕಾರ್ಡ್‌ಗಳ ಬಗ್ಗೆ ಬಡತನ ರೇಖೆಗಿಂತ ಕೆಳಗೆ ಇರುವವರನ್ನು ಗುರುತಿಸಿ ಮಾಹಿತಿ ಕೊಟ್ಟು ಅವರಿಗೆ ಸೌಲಭ್ಯ ತಲುಪಿಸಲು ಪಿಎಲ್‌ವಿ ಅವರ ಪಾತ್ರ ಮಹತ್ವದ್ದಾಗಿದೆ ಎಂದರು.

ವೈಜ್ಞಾನಿಕವಾಗಿ ಮತ್ತು ವಾಸ್ತವದ ಆಧಾರದ ಮೇಲೆ ಅಭ್ಯರ್ಥಿಯ ಸಮಸ್ಯೆಗಳನ್ನು ಆಲಿಸಿ ಕಾನೂನಿನ ಚೌಕಟ್ಟಿನಲ್ಲಿ ಉಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಸಲಹೆ-ಸೂಚನೆ, ಮಾರ್ಗದರ್ಶನ ನೀಡುವುದಾಗಿದೆ ಎಂದರು.

ಈ ಸಂದರ್ಭದಲ್ಲಿ ಹಿರಿಯ ವಕೀಲರಾದ ಎಮ್.ಎ. ಮೌಲ್ವಿ, ಡೀಡ್ಸ್ ಯೋಜನಾ ಸಂಯೋಜಕ ತುಕಾರಾಮ್ ಎಕ್ಕಾರು, ಸಹಾಯಕ ಕಾನೂನು ನೆರವು ಅಭಿರಕ್ಷಕ ಗುರುರಾಜ ಬಿ.ಗೌರಿ, ಫಕ್ಕಿರಮ್ಮ ಲಕ್ಕುಂಡಿ ಉಪಸ್ಥಿತರಿದ್ದರು.

### ಮುಳಗುಂದ ಗವಿಮಠವನ್ನು ಬೆಳಗಿಸಿದ ದಿವ್ಯ ಜ್ಯೋತಿ

# ಮಾಹಾ ತಪಸ್ವಿ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮೀಜಿ


ವೈರಾಗ್ಯ ನಿಧಿ ಶ್ರೀ ಬಾಲಲೀಲಾ ಮಾಹಾಂತ ಶಿವಯೋಗಿಗಳು ಮಾಹಾನ್ ತಪಸ್ವಿಗಳು. ಮುಳಗುಂದ ನಾಡನ್ನು ಭಕ್ತಿಯ ನಾಡನ್ನಾಗಿ ಪರಿವರ್ತಿಸಿದ ಮಾಹಾನ್ ಚೇತನರು. ಉಳವಿ ಜಾತ್ರೆಯನ್ನು ಅಂಗೈಯಲ್ಲೇ ತೋರಿಸಿದವರು. ಹರಿಯುವ ನದಿಯಲ್ಲಿನ ಲಿಂಗವನ್ನು ಅಂಗೈಯಲ್ಲಿ ಬಂದು ಕುಳಿತುಕೊಳ್ಳುವ ಹಾಗೆ ಮಾಡಿದ ಮಾಹಾನ್ ತಪಸ್ವಿ. ಇವರ ಆರಾಧನೆಯಲ್ಲಿ ಇವರ ಸ್ವರೂಪದಲ್ಲಿ ಮುಳಗುಂದ ಗವಿಮಠವನ್ನು ಬೆಳಗಿಸಿದ ದಿವ್ಯ ಜ್ಯೋತಿ ಮ.ನಿ.ಪ್ರ. ಡಾ. ಮಲ್ಲಿಕಾರ್ಜುನ ಮಾಹಾಸ್ವಾಮಿಗಳು.



ಪೂಜ್ಯ ಶ್ರೀ ಮಲ್ಲಿಕಾರ್ಜುನ ಮಾಹಾಸ್ವಾಮಿಗಳು 1952ರಲ್ಲಿ ಕೆರೂರ ಜನಿಸಿದವರು. ಇವರ ತಂದೆ ಶಿವಸಂಗಯ್ಯ, ತಾಯಿ ರಾಜಮ್ಮನವರು. ಪ್ರಾಥಮಿಕ ಶಿಕ್ಷಣವನ್ನು ಕೆರೂರಿನಲ್ಲಿ ಪೂರೈಸಿದರು. ಆಧ್ಯಾತ್ಮದ ಕಡೆ ಒಲವಿನಿಂದಾಗಿ ಶೀವಯೋಗ ಮಂದಿರಲ್ಲಿ ಶಿವಯೋಗ ಸಾಧನೆಗೆ ತೊಡಗಿಕೊಂಡರು. ಅಲ್ಲಿಂದ ಧಾರವಾಡ ಮುರುಘಾಮಠದಲ್ಲಿದ್ದುಕೊಂಡು ಪೂಜ್ಯ ಮಾಹಾಂತಪ್ಪಗಳ ತ್ರಿಕರಣ ಸೇವೆ ಮಾಡುತ್ತ ಪಂಡಿತ ನಾಗಭೂಷಣ ಅವರಲ್ಲಿ ಸಂಸ್ಕೃತ ಅಧ್ಯಯನವನ್ನು ಪೂರೈಸಿದರು. ಮುರುಘಾಮಠದಲ್ಲಿ ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿಗಳನ್ನು ಸಂಘಟಿಸಿ ಧಾರವಾಡದಿಂದ ಎಡೆಯೂರಿಗೆ ಧರ್ಮ ಜಾಗೃತಿ ಪಾದಯಾತ್ರೆ ಕೈಗೊಂಡರು. ಅಂದು ಧರ್ಮ ಜಾಗೃತಿಗಾಗಿ ನಡೆದ ಯಾತ್ರೆ ಇಂದಿಗೂ ನಿಂತಿಲ್ಲ. ನಿರಂತರವಾಗಿ ಹಳ್ಳಿ-ಪಟ್ಟಣಗಳನ್ನದೆ ಊರು-ಕೇರಿಗಳಲ್ಲಿ ಸಂಚರಿಸುತ್ತಾ ದುಶ್ಚಟಗಳಿಂದ ದೂರ ಇರಬೇಕೆಂದು ಬೋಧಿಸುತ್ತಾ ಬೆಳಕಿನ ಬೀಜವನ್ನು ಬಿತ್ತಿದ್ದಾರೆ.

1974ರಲ್ಲಿ ಮುಳಗುಂದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಮಠದ ಅಧಿಕಾರವನ್ನು ವಹಿಸಿಕೊಂಡ ನಂತರ ಅದರ ರೂಪವನ್ನೆ ಬದಲಾಯಿಸಿದವರು. ಶ್ರೀಮಠದ ಗರ್ಭಗುಡಿಯ ಜೀರ್ಣೋದ್ಧಾರ, ಶೈಕ್ಷಣಿಕ ಅಭಿವೃದ್ಧಿಯೊಂದಿಗೆ ಬಾಲಲೀಲಾ ಮಾಹಾಂತ ಶಿವಯೋಗಿಗಳ ಪುರಾಣ ಚರಿತ್ರೆ, ಕೈವಲ್ಯ ದರ್ಪಣ ಮತ್ತು ವೈರಾಗ್ಯದಲರುಗಳ ಪುಸ್ತಕ ಪ್ರಕಟಿಸುವ ಮೂಲಕ ಸಾಹಿತ್ತಿಕವಾಗಿ ಗವಿಮಠವನ್ನು ಬೆಳಗಿಸತೊಡಗಿದರು.

1986ರಲ್ಲಿ ಬೆಂಗಳೂರ ಶ್ರೀ ಸರ್ಪಭೂಷಣ ಮಠದ ಅಧಿಕಾರ ವಹಿಸಿಕೊಂಡ ನಂತರ ಅವರ ಕರ್ತೃತ್ವ ಶಕ್ತಿಗೊಂದು ದೊಡ್ಡ ಭಿತ್ತಿ ದೊರೆತಿರುವುದರಿಂದ ಇಮ್ಮಡಿ ಉತ್ಸಾಹದೊಂದಿಗೆ ಸರ್ಪಭೂಷಣ ಶಿವಯೋಗಿ ಸಾಂಸ್ಕೃತಿಕ ವೇದಿಕೆಯನ್ನು ರಚಿಸಿಕೊಂಡರು. ಅವರ ಮೂಲಕ 25 ಲಕ್ಷ ರೂ ಬೃಹತ್ ಮೊತ್ತದ ಸಾಹಿತ್ಯವನ್ನು ಪ್ರಕಟಿಸಿದ್ದಾರೆ. ಇದರೊಟ್ಟಿಗೆ ಪಶುಪತಿಹಾಳದ ಮಾಹಾಂತೇಶ್ವರಮಠದ ವಹಿಸಿಕೊಂಡು ಮಠದ ಜೀರ್ಣೋದ್ಧಾರ ಮಾಡಿದರು. ಲಿಂ. ಮಾಹಾಂತಪ್ಪಗಳ ಸ್ಮಾರಕ ಮಾಹಾದ್ವಾರವನ್ನು ಕಟ್ಟಿಸಿ, ಪೂಜ್ಯ ಉಭಯ ಅಪ್ಪಗಳವರ ಅಮೃತಶಿಲಾ ಮುತ್ಥಳಿ ಪ್ರತಿಷ್ಠಾಪಿಸಿದರು.




ಕರ್ನಾಟಕದ ಸುಪ್ರಸಿದ್ಧ ಶರಣ ಪರಂಪರೆಯ ಮಠಗಳಲ್ಲಿ ಒಂದಾದ ಧಾರವಾಡ ಮುರುಘಾಮಠ ಪೀಠಾಧಿಪತಿಗಳಾಗಿ 2 ಲಕ್ಷ ರೂಗಳಲ್ಲಿ 300 ಜನರಿಗೆ ಶಿವಾನುಭವ ಕೊಡಿಸಿದರು. ಹಂಪಿಯಿಂದ ಬಸವ ಕಲ್ಯಾಣಕ್ಕೆ, ಪಶುಪತಿಹಾಳದಿಂದ ಅಥಣಿಗೆ, ಬಸವನಬಾಗೇವಾಡಿಯಿಂದ ಯಡಿಯೂರಿಗೆ ಅಲ್ಲದೇ ಧಾರವಾಡದ ಪ್ರತಿಯೊಂದು ಹಳ್ಳಿಗೆ ಕಾಲ್ನಡಿಗೆಯಿಂದ ಸಂಚರಿಸುವ ಮೂಲಕ ಧರ್ಮ ಜಾಗೃತಿ ಪ್ರವಚನಗಳನ್ನು ಮಾಡುತ್ತಾ ಬಂದ ಹಣದಲ್ಲಿನ ಅರ್ಧ ಭಾಗ ಹಣವನ್ನು ಮಠ-ಮಾನ್ಯಗಳಿಗೆ ವಿನಿಯೋಗಿಸಿದ್ದು ಅವರ ಕ್ರಿಯಾಶಕ್ತಿಗೆ ಹಿಡಿದ ಕೈಗನ್ನಡಿಯಾಗಿವೆ.

ನಾಡಿನ ಬಹುತೇಕ ಮಠಾಧೀಶರ, ಜಗದ್ಗುರುಗಳ, ಸಾಹಿತಿಗಳ, ವಿದ್ವಾಂಸರ, ನಿಕಟ ಸಂಪರ್ಕವನ್ನು ಇಟ್ಟುಕೊಂಡಿರುವ ಶ್ರೀಗಳು ಸ್ವತಃ ವಿದ್ವಾಂಸರು. ಭಕ್ತರ ಮುಖದಲ್ಲಿ ಲಿಂಗವೇ ಕಾಣಬೇಕು ಎಂಬ ಶರಣರ ವಾಣಿಯಂತೆ ನಡೆದವರು. ಪುಜ್ಯರು ಧಾರವಾಡಮಠಕ್ಕೆ, ಮುಳಗುಂದ ಮಠಕ್ಕೆ ಅಲ್ಲದೇ ನಾಡಿಗೆ ಸೌಭಾಗ್ಯ ನಿಧಿಯಿದ್ದಂತೆ.

ಪೂಜ್ಯರು ಪ್ರತಿಭಾವಂತ ಪ್ರವಚನಕಾರರು, ಉತ್ಕಟ ಪುಸ್ತಕ ಪ್ರೇಮಿಗಳು, ನಿರಂತರ ಅಧ್ಯಯನಶೀಲರು. ಸ್ವತಃ ಬರಹಗಾರರಾಗಿ ಹಲವು ಕೃತಿಗಳನ್ನು ರಚಿಸಿದ್ದಾರೆ. ಶ್ರೀಮಠದ ಮೂಲಕ ನೂರಾರು ಮೌಲ್ಯಯುತ ಗ್ರಂಥಗಳನ್ನು ಪ್ರಕಟಿಸಿದ್ದಾರೆ. ಧಾರವಾಡದ ಮುರುಘಾಮಠದ ಪ್ರಸಾದ ನಿಲಯ ಶತಮಾನೋತ್ಸವ ಸಂದರ್ಭಧಲ್ಲಿ 111 ಮೌಲಿಕ ಕೃತಿಗಳನ್ನು ಏಕಕಾಲಕ್ಕೆ ಪ್ರಕಟಿಸುವ ಮೂಲಕ ದಾಖಲೆಯನ್ನು ಬರೆದವರು. ಪೂಜ್ಯರು ಸಂಸ್ಕೃತಿ ಸಂಪನ್ನರು, ಸಾಹಿತಿ, ಕಲಾವಿದರ ಪೋಷಕರು.

ಪೂಜ್ಯರ ಅಸಾಧಾರಣ ವ್ಯಕ್ತಿತ್ವ ಹಾಗೂ ಕಾರ್ಯ ಸಾಧನೆಗಾಗಿ ಪ್ರವಚನಾಚಾರ್ಯ ಸಾಧಕ, ಶ್ರೇಷ್ಠ ನವ ಸಮಾಜ ನಿರ್ಮಾಪಕರು, ಸರ್ವ ಧರ್ಮ ಸಮನ್ವಯ ಪ್ರೇಮಿಗಳು, ಪುಣ್ಯಭೂಮಿಯ ಪಾವನ ಪುತ್ರರತ್ನರು, ಪುರಾಣ ಪ್ರವಚನರತ್ನ ಸರ್ವಧರ್ಮ ಸಮನ್ವಯ ಹರಿಕಾರರು ಮುಂತಾದ ಬಿರುದು ನೀಡಿ ಗೌರವಿಸಲಾಗಿದೆ.

ಹೀಗೆ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಸಾಹಿತ್ಯ ಮತ್ತು ಸಾಂಸ್ಕೃತಿಕ ಸೇವೆಯಲ್ಲಿ ತಮ್ಮನ್ನು ತಾವು ನಿರಂತರವಾಗಿ ತೊಡಗಿಸಿಕೊಳ್ಳುವುದರ ಜೊತೆಯಲ್ಲಿ ಧರ್ಮ ಜಾಗೃತಿ, ಸಮಾಜಶಾಸ್ತ್ರ, ಶೈಕ್ಷಣಿಕ ಪ್ರಗತಿ, ನೈತಿಕ, ಸಾತ್ವಿಕ, ಬದುಕು ರೂಪಿಸುವಲ್ಲಿ ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ಈ ನಾಡಿಗೆ ಬಹು ದೊಡ್ಡ ಕೊಡುಗೆಯನ್ನು ನೀಡಿದ್ದಾರೆ. ಈ ಅಪೂರ್ವ ಸಾಧನೆಯನ್ನು ಗುರುತಿಸಿ ಕರ್ನಾಟಕ ವಿಶ್ವವಿದ್ಯಾಲಯವು 2022ರಲ್ಲಿ ಡಾಕ್ಟರ್ ಆಫ್ ಲೆಟರ್ಸ್ ಗೌರವ ಪದವಿಯನ್ನು ನೀಡಿ ಗೌರವಿಸಿದೆ.

ಪೂಜ್ಯರು ದೀಪವಾಗಲಿಲ್ಲ, ದೀಪ ಹಚ್ಚುವ ಕೈಗಳಾದವರು. ಕೇವಲ ಮಾರ್ಗವಾಗಲಿಲ್ಲ, ಮಾರ್ಗ ತೋರಿಸುವ ದಾರಿ ದೀಪವಾದವರು. ಅವರ ಕಾರ್ಯಗಳು ಮೌನವಾಗಿದ್ದರೂ ಅವುಗಳ ಪ್ರತಿಧ್ವನಿ ಸಮಾಜದ ಹೃದಯದಲ್ಲಿ ಸದಾ ಕೇಳಿಸುತ್ತಲೇ ಇರುತ್ತದೆ.

**– ಶ್ರೀಕಾಂತ ವೀ.ಸಿದ್ದನಗೌಡರ.**

### ಜನಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂಸ್ಕೃತಿ ಪರಿಪಾಲನೆಯಿಂದ ಬಾಳು ಉಜ್ವಲ



ನೇತೃತ್ವ ವಹಿಸಿದ ಯಸಳೂರು ತೆಂಕಲಗೂಡು ಮಠದ ಚನ್ನಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಎಲ್ಲ ಧರ್ಮಗಳಲ್ಲಿ ಮಾನವೀಯ ಆದರ್ಶ ಮೌಲ್ಯಗಳು ಇರುತ್ತವೆ. ವೀರಶೈವ ಧರ್ಮದಲ್ಲಿ ಗಂಡು-ಹೆಣ್ಣು, ಮೇಲು-ಕೀಳು, ಬಡವ-ಶ್ರೀಮಂತ ಭೇದ ಭಾವವಿಲ್ಲದೆ ಎಲ್ಲರಿಗೂ ಸಮಾನ ಅವಕಾಶವನ್ನು ಒದಗಿಸಿಕೊಟ್ಟಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರಧಾರೆಗಳು ಅಂದು ಇಂದಿಗಷ್ಟೇ ಅಲ್ಲ, ಎಂದೆಂದಿಗೂ ಎಲ್ಲರ ಬದುಕಿಗೆ ಆದರ್ಶ ದಾರಿ ತೋರಿಸಿದ್ದನ್ನು ಮರೆಯುವಂತಿಲ್ಲ ಎಂದರು.

**■ವಿಜಯಸಾಕ್ಷಿ ಸುದ್ದಿ, ಆಲೂರು**

ಭಾರತೀಯ ಸಂಸ್ಕೃತಿ ಉತ್ಕೃಷ್ಟವಾದುದು. ಬದುಕಿ ಬಾಳುವ ಮನುಷ್ಯನಿಗೆ ಸಂಸ್ಕಾರ ಮತ್ತು ಉತ್ತಮ ವಿಚಾರಗಳ ಚಿಂತನ ಅವಶ್ಯಕವಾಗಿದೆ. ಸಂಸ್ಕಾರ ಮತ್ತು ಸಂಸ್ಕೃತಿ ಪರಿಪಾಲನೆಯಿಂದ ಮಾನವನ ಬಾಳು ಉಜ್ವಲಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಸಿಂಧುವಳ್ಳಿ ಶ್ರೀ ವೀರಭದ್ರೇಶ್ವರ ನೂತನ ಶಿಲಾ ದೇವಸ್ಥಾನದ ಉದ್ಘಾಟನೆ, ಪ್ರಾಣ ಪ್ರತಿಷ್ಠಾಪನೆ, ಕಳಸಾರೋಹಣದ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹಗಲು ಸೂರ್ಯ, ರಾತ್ರಿ ಚಂದ್ರ ಬೆಳಕನ್ನು ನೀಡಬಲ್ಲರು. ಆದರೆ ಧರ್ಮ ಸರ್ವಕಾಲಕ್ಕೂ, ಸರ್ವಸಮುದಾಯಕ್ಕೂ ಬೆಳಕಿನ ದಾರಿ ತೋರಬಲ್ಲದು. ಧರ್ಮವೆಂದರೆ ಆಡುವ ಮಾತಲ್ಲ. ಆಡಿದ ಮಾತಿನಂತೆ ನಡೆಯುವುದೇ ನಿಜವಾದ ಧರ್ಮ. ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ವೀರಶೈವ ಧರ್ಮವನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಭೂಮಂಡಲದಲ್ಲಿ ಸ್ಥಾಪಿಸಿ ಸಕಲರನ್ನು ಉದ್ದರಿಸಿದ್ದಾರೆ. ಅವರ ತತ್ವ ಸಂದೇಶಗಳು ಮತ್ತು ವಿಚಾರಧಾರೆಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪ. ದುಷ್ಟರ ಸಂಹಾರ ಮತ್ತು ಶಿಷ್ಟರ ಸಂರಕ್ಷಣೆಗಾಗಿ ಅವತರಿಸಿದ ಶಕ್ತಿಯೇ ಶ್ರೀ ವೀರಭದ್ರ ಸ್ವಾಮಿ. ಆತನ ಕೃಪಾ ಕಾರುಣ್ಯ ಸಕಲರ ಮೇಲೆ ಇರಲಿ ಎಂದು ಶುಭ ಹಾರೈಸಿದರು.

ಪವಿತ್ರ ಧರ್ಮ ಸಮಾರಂಭವನ್ನು ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷ ಸಿದ್ದೇಶ ನಾಗೇಂದ್ರ ಮತ್ತು ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಸಂಯುಕ್ತವಾಗಿ ಉದ್ಘಾಟಿಸಿ ಸಿಂಧುವಳ್ಳಿ ಗ್ರಾಮಸ್ಥರ ಅದ್ಭುತ ಸಾಧನೆಯನ್ನು ಕಂಡು ಹರುಷ ವ್ಯಕ್ತಪಡಿಸಿದರು.

ವಾಗ್ಮಿ ಹಾರಿಕಾ ಮಂಜುನಾಥ್ ಮಾತನಾಡಿ, ಭಾರತೀಯ ಹಿಂದೂ ಸಂಸ್ಕೃತಿಯಲ್ಲಿ ಏನೆಲ್ಲ ಆಧ್ಯಾತ್ಮ ಸಂಪತ್ತು ಅಡಗಿದೆ. ಅದನ್ನು ಅರಿಯುವ ಮತ್ತು ಆಚರಣೆಯಲ್ಲಿ ತರಲು ಪ್ರಾಮಾಣಿಕ ಪ್ರಯತ್ನ ಎಲ್ಲರೂ ಮಾಡಬೇಕಾಗಿದೆ. ವೈಚಾರಿಕತೆ ಮತ್ತು ಆಧುನಿಕತೆ ಹೆಸರಿನಲ್ಲಿ ಸಂಸ್ಕೃತಿ, ಸಭ್ಯತೆ ನಾಶವಾಗಬಾರದು. ಪ್ರತಿಯೊಬ್ಬರಲ್ಲಿ ಹಿಂದೂ ಸಂಸ್ಕೃತಿಯ ಆದರ್ಶ ಮೌಲ್ಯಗಳನ್ನು ಉಳಿಸಿ ಬೆಳೆಸುವ ಕಾರ್ಯ ಮಾಡಬೇಕೆಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾ ಘಟಕದ ಅಧ್ಯಕ್ಷ ನವಿಲೇ ಪರಮೇಶ್ವರ, ಮಂಜಣ್ಣ, ಹರೀಶ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಧನ್ಯಶ್ರೀ ಪ್ರಾರ್ಥನೆಯೊಂದಿಗೆ ಭರತನಾಟ್ಯ ಅಭಿನಯಿಸಿದರು. ಶಿಕ್ಷಕ ಶಿವಕುಮಾರ್ ನಿರೂಪಿಸಿದರು.

# ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ಕೆಳಕಂಡ ಆಸ್ತಿ ಯನ್ನು ವಿವಿಧ ಇಲಾಖೆಗಳಿಗೆ ಜಾಗೆ ಮಂಜೂರು ಮಾಡುವುದು ಇರುತ್ತದೆ. ಸರ್ವೆ ನಂ.38//2 ಪ್ಲಾಟ್ ನಂ.ನೇದ್ದರ ಶ್ರೀಮತಿ ವಿಮಲಕ್ಕ ಕೋಂ ಬಸಲಿಂಗಪ್ಪ ಕಪ್ಪತ್ತನವರ ಲೇ-ಔಟ್ ನಲ್ಲಿ ಬರುವ 38//2 ಪ್ಲಾಟ್ 01 ನೇದ್ದರ ನಾಗರಿಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗೆ ; ಆಸ್ತಿ ಸಂಖ್ಯೆ ರಿ.ಸ.ನಂ.126/3 ಅ ಎ.ಎ.ಪಠಾಣ ಅವರ ಜಾಗೆಯಲ್ಲಿ ಪ್ಲಾಟ್ ನಂ. 20 ನೇದ್ದರಲ್ಲಿ 25.25 ಫಿ 32 ಮೀಟರ್ ಅಳತೆ ಜಾಗೆಯನ್ನು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ನಿರ್ಮಾಣಕ್ಕಾಗಿ, ನೂರಶೆಟ್ಟರ ಇವರ ಲೇಔಟ್ ನಲ್ಲಿ ನಾಗರಿಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ಜಾಗೆಯಲ್ಲಿ 04 – ಗುಂಟೆ ಜಾಗೆಯನ್ನು ಶಿರಹಟ್ಟಿ ತಾಲೂಕಾ ನಿವೃತ್ತ ನೌಕರರ ಸಂಘ ( ರಿ) ಶಿರಹಟ್ಟಿ ಇವರ ನಿವೃತ್ತಿ ನೌಕರರ ಸಂಘದ ಭವನ ನಿರ್ಮಾಣಕ್ಕಾಗಿ ಒದಗಿಸಲು ತೀರ್ಮಾನಿಸಿದೆ.

ಮಂಜೂರಾತಿಗೆ ಸಾರ್ವಜನಿಕ ಆಕ್ಷೇಪಣೆಯನ್ನು ಆಹ್ವಾನಿಸಲಾಗಿದ್ದು, ಏನಾದರೂ ಸಾರ್ವಜನಿಕ ಆಕ್ಷೇಪಣೆಗಳಿದ್ದಲ್ಲಿ ಪ್ರಕಟಣೆ ಹೊರಡಿಸಿದ 30 ದಿನಗಳ ಒಳಗಾಗಿ ಈ ಕಾರ್ಯಾಲಯಕ್ಕೆ ಲಿಖಿತ ಅರ್ಜಿಯೊಂದಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# ಅಂಗನವಾಡಿಗೆ ಏರ್‌ಕೂಲರ್ ಕೊಡುಗೆ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದ 1ನೇ ವಾರ್ಡಿನಲ್ಲಿ ಲಕ್ಷ್ಮೀ ಕಾಡಸಿದ್ಧೇಶ್ವರ ಇವಳ ಜನ್ಮದಿನದ ನಿಮಿತ್ತ ಸಮಾಜ ಸೇವಕ ಸಿದ್ದಯ್ಯ ಕಾಡಸಿದ್ದೇಶ್ವರಮಠ ಅವರು ಅಂಗನವಾಡಿಗೆ ಏರ್‌ಕೂಲರ್ ಕೊಡುಗೆಯಾಗಿ ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕ ಸಿದ್ಧಯ್ಯ ಕಾಡಸಿದ್ಧೇಶ್ವರ ಮಾತನಾಡಿ, ಮಕ್ಕಳ ಮೊದಲ ಪಾಠಶಾಲೆಯಾದ ಅಂಗನವಾಡಿಯಲ್ಲಿ ಶಿಕ್ಷಕರು ಮಕ್ಕಳಿಗೆ ಉತ್ತಮ ಶಿಕ್ಷಣದೊಂದಿಗೆ ಒಳ್ಳೆಯ ಮಾರ್ಗದರ್ಶನ ಹಾಗೂ ಶಿಸ್ತನ್ನು ಕಲಿಸಿದರೆ, ಮುಂದಿನ ದಿನಗಳಲ್ಲಿ ಮಕ್ಕಳು ಸಮಾಜದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಅಂಗನವಾಡಿ ಶಿಕ್ಷಕಿ ನಾಗರತ್ನ ಮಠದ ಮಾತನಾಡಿದರು. ಈ ಸಂದರ್ಭದಲ್ಲಿ ರೂಪಾ ಸಿದ್ದಯ್ಯ ಕಾಡಸಿದ್ದೇಶ್ವರಮಠ, ಅಂಗನವಾಡಿ ಸಹಾಯಕಿ ರೇಷ್ಮಾ ಕಂಪಲಿಮನಿ, ವಿದ್ಯಾರ್ಥಿಗಳು ಇದ್ದರು.

# ಗ್ರಾ.ಪಂಗಳಿಗೆ ಆಡಳಿತಾಧಿಕಾರಿಗಳ ನೇಮಕ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮ ಪಂಚಾಯಿತಿಗಳ 5 ವರ್ಷಗಳ ಅಧಿಕಾರಾವಧಿಯು ಜ. 31ರಂದು ಅಂತ್ಯಗೊಳ್ಳುತ್ತಿದ್ದು, ರಾಜ್ಯದ ಎಲ್ಲ ಗ್ರಾಮ, ಸ್ಥಳೀಯ ಸಂಸ್ಥೆಗಳಿಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡುವಂತೆ ಸರ್ಕಾರ ಆದೇಶ ಹೊರಡಿಸಿದೆ. ಆದೇಶದನ್ವಯ ಆಡಳಿತಾತ್ಮಕ ತೊಂದರೆ ಉಂಟಾಗದಂತೆ ಜಿಲ್ಲಾಧಿಕಾರಿಗಳು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿದ್ದಾರೆ.

ಲಕ್ಷ್ಮೇಶ್ವರ ತಾಲೂಕಿನ ಅಡರಕಟ್ಟಿ ಗ್ರಾ.ಪಂಗೆ ತಾ.ಪಂ ಸಹಾಯಕ ನಿರ್ದೇಶಕರು, ಆದ್ರಳ್ಳಿ-ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು, ಬಾಲೆಹೊಸೂರ-ಕ್ಷೇತ್ರ ಶಿಕ್ಷಣಾಧಿಕಾರಿಗಳು, ದೊಡ್ಡೂರ-ಅಕ್ಷರ ದಾಸೋಹ ಸಹಾಯಕ ನಿರ್ದೇಶಕರು, ಗೊಜನೂರ-ಪಶುಪಾಲನಾ ಇಲಾಖೆ ಸಹಾಯ ನಿರ್ದೇಶಕರು, ಗೋವನಾಳ-ಸಾಮಾಜಿಕ ವಲಯ ಅರಣ್ಯಾಧಿಕಾರಿ, ಹುಲ್ಲೂರ-ತಾ.ಪಂ ಇಓ, ಮಾಡಳ್ಳಿ- ಪಿಡಬ್ಲೂಡಿ ಇಓ, ಪುಟಗಾಂವ್ ಬಡ್ನಿ-ಸಿಡಿಪಿಓ, ರಾಮಗೇರಿ-ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರು, ಶಿಗ್ಲಿ-ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ, ಸೂರಣಗಿ-ಪಂಚಾಯತರಾಜ್ ಇಂಜಿನಿಯರಿಂಗ್ ಇಲಾಖೆ ಅಧಿಕಾರಿ, ಯಳವತ್ತಿ-ಕೃಷಿ ಇಲಾಖೆ ಸಹಾಯಕ ನಿರ್ದೇಶಕರುಗಳನ್ನು ಆಡಳಿತಾಧಿಕಾರಿಗಳಾಗಿ ನೇಮಿಸಿದ್ದಾರೆ. ತಾಲೂಕಿನ ಬಟ್ಟೂರ ಗ್ರಾ.ಪಂನ ಆಡಳಿತಾವಧಿ ಮಾತ್ರ ಇನ್ನೂ ಮುಗಿದಿಲ್ಲ.

# ಬಾಪೂಜಿ ಶಾಲೆಯಲ್ಲಿ ಗಣರಾಜ್ಯೋತ್ಸವ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ. 1ಇವರ ಸಹಯೋಗದಲ್ಲಿ 77ನೇ ಗಣರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಶೇಖರಗೌಡ ರೋಣದ ಧ್ವಜಾರೋಹಣವನ್ನು ನೆರವೇರಿಸಿದರು. 3ನೇ ತರಗತಿ ವಿದ್ಯಾರ್ಥಿನಿಯರು ರಾಷ್ಟ್ರಗೀತೆ ಹಾಡಿದರೆ, 4ನೇ ತರಗತಿ ವಿದ್ಯಾರ್ಥಿ ಮಣಿಕಂಠ ಗರ್ಜಪ್ಪನವರ ಭಾರತದ ಸಂವಿಧಾನ ಪೀಠಿಕೆ ಪ್ರಸ್ತುತಪಡಿಸಿದನು.

3ನೇ ತರಗತಿ ವಿದ್ಯಾರ್ಥಿಗಳು ಕವಿ ಪ.ಗು. ಸಿದ್ದಾಪುರ ರಚಿಸಿದ ಮುಳುಗದ ಸೂರ್ಯ ಪದ್ಯವನ್ನು ತಮ್ಮ ಅಭಿನಯ ಮೂಲಕ ಸೊಗಸಾಗಿ ಹಾಡಿ ಸಾರ್ವಜನಿಕರ ಮೆಚ್ಚುಗೆ ಪಡೆದರು. ಎಲ್ಲ ವಿದ್ಯಾರ್ಥಿಗಳು ಕನ್ನಡ, ಇಂಗ್ಲೀಷ್‌ನಲ್ಲಿ ಭಾಷಣ ಮಾಡಿದರು.

ಕಾರ್ಯಕ್ರಮದಲ್ಲಿ ಹಿರಿಯರಾದ ಬಾಳಪ್ಪ ನಿಡಗುಂದಿ, ಶಿಕ್ಷಕರಾದ ಬಿ.ಐ. ಗರ್ಜಪ್ಪನವರ, ಆರ್.ಬಿ. ಬರದ್ವಾಡ, ಅರ್ಜುನ ಚಲವಾದಿ, ಎ.ಎಂ. ದಂಡಿನ, ಪಿ.ಬಿ. ಬರದ್ವಾಡ, ಅಂಬುಜಾ ಕುಲಕರ್ಣಿ ಹಾಗೂ ಪಾಲಕರು, ಸಾರ್ವಜನಿಕರು ಇದ್ದರು.

ಸೊಸೈಟಿಯ ಮ್ಯಾನೇಜರ್ ಶರಣಪ್ಪ ಗರ್ಜಪ್ಪನವರ, ಆರ್.ಎಂ. ದಂಡಿನ ಕಾರ್ಯಕ್ರಮ ನಿರೂಪಿಸಿದರು.

# ಎಸ್‌ಕೆಎನ್‌ಜಿ ಕಾಲೇಜಿನಲ್ಲಿ ಹುತಾತ್ಮ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಗಂಗಾವತಿ**

ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಹುತಾತ್ಮರ ದಿನವನ್ನು ಆಚರಿಸಲಾಯಿತು. ಮಹಾತ್ಮಾ ಗಾಂಧೀ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೇಶದ ಹುತಾತ್ಮರನ್ನು ಸ್ಮರಿಸಲಾಯಿತು.

ಕಾಲೇಜಿನ ಪ್ರಾಚಾರ್ಯ ಡಾ.ಶಿವರಾಜ ಗುರಿಕಾರ ಮಾತನಾಡಿ, ದೇಶಕ್ಕಾಗಿ ಹೋರಾಡಿದ ಮಹಾತ್ಮಾ ಗಾಂಧೀ ಸೇರಿದಂತೆ ಅನೇಕರು ಹುತಾತ್ಮರಾಗಿದ್ದು ಅವರ ಸೇವೆ ಸ್ಮರಿಸಬೇಕು. ಅವರ ಆದರ್ಶಗಳನ್ನು ವಿದ್ಯಾರ್ಥಿಗಳಾದಿಯಾಗಿ ಎಲ್ಲರೂ ಅಳವಡಿಸಿಕೊಂಡು ಪಾಲಿಸಬೇಕು ಎಂದು ಕರೆ ನೀಡಿದರು.

ಪತ್ರಿಕೋದ್ಯಮ ವಿಭಾಗದ ಅತಿಥಿ ಉಪನ್ಯಾಸಕ ಬಸವರಾಜ ಕರುಗಲ್ ಮಾತನಾಡಿದರು. ಈ ಸಂದರ್ಭದಲ್ಲಿ ಬೋಧಕ ಸಿಬ್ಬಂದಿ ನಿರ್ವಹಣಾ ಶಾಸ್ತ್ರದ ಸಹಾಯಕ ಪ್ರಾಧ್ಯಾಪಕ ಅಶ್ರಫ್ ಅಳ್ಳಳ್ಳಿ, ಸತೀಶ್ ಇಟಗಿ, ಮಾಲತಿ, ಪತ್ರಾಂಕಿತ ವ್ಯವಸ್ಥಾಪಕರಾದ ರಾಘಮ್ಮ ಸಿ., ಅಧೀಕ್ಷಕರಾದ ಶಾಮೀದ್.ಕೆ, ಪ್ರಥಮ ದರ್ಜೆ ಸಹಾಯಕರಾದ ಪ್ರತಿಭಾ ಮುದಗಲ್, ಬೋಧಕೇತರ ಸಿಬ್ಬಂದಿ ವೀರೇಶ್, ದುರ್ಗೇಶ್, ಮಡಿವಾಳಪ್ಪ, ಮಲ್ಲಿಕಾರ್ಜುನ, ನಾಗರಾಜ, ಸುಶೀಲಮ್ಮ, ಶರಣಮ್ಮ ಇತರರಿದ್ದರು. ವೆಂಕಟೇಶ ವಂದಿಸಿದರು.

# ಜಾನಪದ ಕಲೆಗಳು ನಮ್ಮ ಸಂಸ್ಕೃತಿಯ ಜೀವನಾಡಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಜನೆ ಮತ್ತು ಜಾನಪದ ಕಲೆಗಳು ನಮ್ಮ ಸಂಸ್ಕೃತಿಯ ಜೀವನಾಡಿಗಳಾಗಿದ್ದು, ಇವುಗಳನ್ನು ಉಳಿಸಿ-ಬೆಳೆಸುವುದು ಅತ್ಯಗತ್ಯ ಎಂದು ರೋಣ ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಹೇಳಿದರು.

ಪಟ್ಟಣದ ಗಜಾನನ ದೇವಸ್ಥಾನದಲ್ಲಿ ಕೊಡಿಕೊಪ್ಪದ ಹಠಯೋಗಿ ವೀರಪ್ಪಜ್ಜನ ಜಾತ್ರಾ ಮಹೋತ್ಸವದ ಹಾಗೂ ವಿಜಯಕುಮಾರ ಅಂಗಡಿ ಇವರ ಸ್ಮರಣಾರ್ಥ ಬುಧವಾರ ರಾತ್ರಿ ಕಲ್ಮೇಶ್ವರ ಭಜನಾ ಸಂಘದ ವತಿಯಿಂದ ಹೊನಲು ಬೆಳಕಿನ ರಾಜ್ಯ ಮಟ್ಟದ ಭಜನಾ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ದಿನದಲ್ಲಿ ಜನಪದ ಕಲೆಗಳು ನಶಿಸುತ್ತಿವೆ. ಜನಪದ ಕಲೆಗಳಿಗೆ ಜೀವ ತುಂಬುತ್ತಿರುವ ಭಜನಾ ಸ್ಪರ್ಧೆಗಳನ್ನು ಉಳಿಸಿ ಬೆಳೆಸಬೇಕು. ಮೌಲ್ಯಯುತ ಜಾನಪದ ಕಲೆಗಳನ್ನು ದಾಖಲಿಸಿ ಮುಂದಿನ ಪೀಳಿಗೆಗೆ ಪರಿಚಯಿಸಬೇಕು. ಇಂದಿನ ಯುವ ಸಮೂಹ ಜನಪದ ಕಲೆಯನ್ನು ಮರೆಯುತ್ತಿದೆ. ಯುವಕರಲ್ಲಿ ಜನಪದ ಕಲೆಯನ್ನು ಉಳಿಸಿ, ಬೆಳೆಸಬೇಕಾದುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

**ಫಲಿತಾಂಶ:** ಭಜನಾ ಸ್ಪರ್ಧೆಯಲ್ಲಿ 11 ಭಜನಾ ಮಂಡಳಿಗಳು ಪಾಲ್ಗೊಂಡಿದ್ದವು. ಗೊಣ್ಣಾಗರದ ದುರ್ಗಾದೇವಿ ಭಜನಾ ಸಂಘ ಪ್ರಥಮ, ರೋಣದ ದುರ್ಗಾದೇವಿ ಭಜನಾ ಮಂಡಳಿ ದ್ವಿತೀಯ, ಬಾಡದ ಕರಿಯಮ್ಮ ದೇವಿ ಭಜನಾ ಸಂಘ ತೃತೀಯ, ಜಿಗಳೂರಿನ ಬಸವೇಶ್ವರ ಭಜನಾ ಸಂಘ ಚತುರ್ಥ ಬಹುಮಾನ ಪಡೆದರು.

ಈವೇಳೆ ರೋಣದ ಬೂದೀಶ್ವರ ಮಠದ ವಿಶ್ವನಾಥ ಸ್ವಾಮೀಜಿ ಆರ್ಶಿವಚನ ನೀಡಿದರು. ಎಸ್.ವಿ. ಹಳ್ಳಿಕೇರಿ, ಮೈಲಾರಪ್ಪ ಚಳ್ಳಮರದ ಅಲ್ಲಾಬಕ್ಷಿ ನದಾಫ್, ಕಳಕಪ್ಪ ಅಬ್ಬಿಗೇರಿ, ಸಂತೋಷ ಹನಮಸಾಗರ, ಪರಪ್ಪ ಬೆಡಗಲ, ಕಾಂತಪ್ಪ ಹೊಸಮನಿ, ಪ್ರಕಾಶ ಪಾಯಪ್ಪಗೌಡ್ರ, ಮಂಜಪ್ಪ ಅಂಕದ, ಚನ್ನಬಸಪ್ಪ ಜೋಳದ, ರಮೇಶ ಚವಡಿ, ಮಹೇಶ ಜೋಳದ ಮುಂತಾದವರಿದ್ದರು.

# ಶ್ರೀ ಹುಲಗೆಮ್ಮದೇವಿ ಮೂರ್ತಿ ಪ್ರತಿಷ್ಠಾಪನೆ ಫೆ. 1ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಹೊರವಲಯದ ಚಿಕ್ಕೊಪ್ಪದವರ ಜಮೀನಿನಲ್ಲಿ ಫೆ. 1ರಂದು ಮುಂಜಾನೆ 8.30ಕ್ಕೆ ಶ್ರೀ ಹುಲಗೆಮ್ಮ ದೇವಿ ಮೂರ್ತಿ ಮರು ಪ್ರತಿಷ್ಠಾಪನೆ, ನೂತನ ಶ್ರೀ ರೇವಣಸಿದ್ದೇಶ್ವರ ಹಾಗೂ ಬಸವಣ್ಣ ಮೂರ್ತಿಗಳ ಪ್ರತಿಷ್ಠಾಪನೆ ಜರುಗಲಿದೆ. ಮೂರ್ತಿಗಳಿಗೆ ಮಹಾ ರುದ್ರಾಭಿಷೇಕ, ಮಹಾ ಪೂಜೆಯನ್ನು ರುದ್ರಮುನಿಸ್ವಾಮಿ ಹಿರೇಮಠ ನೆರವೇರಿಸುವರು.

ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳ ಅಮೃತ ಹಸ್ತದಿಂದ ಮೂರ್ತಿ ಪ್ರತಿಷ್ಠಾಪನೆಗೊಳ್ಳಲಿದೆ. 11 ಗಂಟೆಗೆ ದೇವಸ್ಥಾನದ ಉದ್ಘಾಟನೆಯನ್ನು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಹಾಗೂ ಪಾರ್ವತೆಮ್ಮ ಚಿಕ್ಕೊಪ್ಪದ ಹಾಗೂ ಬಸವಣ್ಣೆಮ್ಮ ಕಾಳಗಿ ನೆರವೇರಿಸುವರು.

ಸಿದ್ದಲಿಂಗಪ್ಪ ವೀ.ಚಿಕ್ಕೊಪ್ಪದ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಬಿಜಾಪೂರದ ರುದ್ರಪ್ಪ ತೋಟ-ದ, ಲಕ್ಕುಂಡಿಯ ವೀರಪ್ಪ ಸೊಪ್ಪಿನ, ಶಾಂತಪ್ಪ ಕಲಕೇರಿ, ನರೇಗಲ್ಲ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಮುತ್ತಣ್ಣ ಪಲ್ಲೇದ, ಗಂಗಾಧರ ಕೊಟಗಿ, ಸವಡಿಯ ಅಶೋಕಪ್ಪ ಪವಾಡಶೆಟ್ಟರ, ಗದಗನ ರಾಚಪ್ಪ ಕೊಟಗಿ, ಅಬ್ಬಿಗೇರಿಯ ಚಂದ್ರಶೇಖರಪ್ಪ ಕಾಳಗಿ, ಇಳಕಲ್ಲಿನ ಬಸವರಾಜ ಕುರಹಟ್ಟಿ ಹಾಗೂ ವಿರೂಪಾಕ್ಷಪ್ಪ ಕೊಡಗಲಿ ಉಪಸ್ಥಿತರಿರುವರು.

ನಂತರ ಹಿರಿಯರಾದ ಲಕ್ಕುಂಡಿ ಗ್ರಾಮದ ಪುತ್ರವ್ವ ಕಲಕೇರಿ, ಶಾಂತಮ್ಮ ಮಾರನಬಸರಿ, ಹಂಪಮ್ಮ ಯರಗುಪ್ಪಿ, ಬಸವ್ವ ಅಂಕದ, ಬಸವಣ್ಣೆವ್ವ ಕಾಳಗಿ, ನೀಲಮ್ಮ ಗುಜಮಾಗಡಿ, ಬಸವಣ್ಣೆಮ್ಮ ಚಿಕ್ಕೊಪ್ಪದ, ಹನಮಂತಗೌಡ ಪಾಯಪ್ಪಗೌಡ್ರ ಹಾಗೂ ಪರಮೇಶಪ್ಪ ಚಿಕ್ಕೊಪ್ಪದ ಇವರನ್ನು ಸನ್ಮಾನಿಸಲಾಗುವುದು ಎಂದು ಶಾಂತಪ್ಪ ಚಿಕ್ಕೊಪ್ಪದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಕ್ರೀಡಾಕೂಟ ಉದ್ಘಾಟಿಸಿದ ಪ್ರಭಾರ ಜಿಲ್ಲಾಧಿಕಾರಿ ಭುವನೇಶ ಪಾಟೀಲ**

# ಒತ್ತಡ ನಿವಾರಣೆಗೆ ನೌಕರರು ಕ್ರೀಡೆಗಳಲ್ಲಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಾರ್ವಜನಿಕ ಸೇವೆಯಲ್ಲಿ ತೊಡಗಿಕೊಂಡಿರುವ ಸರ್ಕಾರಿ ನೌಕರರಿಗೆ ನಿರಂತರ ಕಾರ್ಯದಿಂದಾಗಿ ಮಾನಸಿಕ ಮತ್ತು ದೈಹಿಕ ಒತ್ತಡಗಳು ಉಂಟಾಗುವುದು ಸಾಮಾನ್ಯ. ಇವುಗಳ ನಿಯಂತ್ರಣ ಮತ್ತು ಆರೋಗ್ಯಕರ ಜೀವನ ಮತ್ತು ಗುಣಮಟ್ಟದ ಸೇವೆಗಾಗಿ ಪ್ರತಿಯೊಬ್ಬ ಸರ್ಕಾರಿ ಅಧಿಕಾರಿ ಮತ್ತು ನೌಕರರು ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ನಿರಂತರವಾಗಿ ಮತ್ತು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಪ್ರಭಾರ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹೇಳಿದರು.

ಅವರು ಶುಕ್ರವಾರ ಆರ್. ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಧಾರವಾಡ ಜಿಲ್ಲಾ ಘಟದಿಂದ ಆಯೋಜಿಸಿದ್ದ 2026-27ನೇ ಸಾಲಿನ ಜಿಲ್ಲಾ ಕ್ರೀಡಾಕೂಟ ಹಾಗೂ ಸಾಂಸ್ಕೃತಿ ಸ್ಪರ್ಧೆಗಳ



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರಕಾರಿ ನೌಕರರು ಕಚೇರಿ ಕೆಲಸಕ್ಕೆ ಸೀಮಿತರಾಗದೇ, ಕ್ರೀಡೆ, ಸಾಂಸ್ಕೃತಿಕ ಕಾರ್ಯಚಟುವಟಿಕೆಗಳಲ್ಲಿ ನಿರಂತರವಾಗಿ ಭಾಗವಹಿಸಬೇಕು. ಕುಟುಂಬದ ಸದಸ್ಯರೊಂದಿಗೆ ಸಮಯ ಕಳೆಯಬೇಕು ಮತ್ತು ವಯಕ್ತಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ರಾಜ್ಯ ಸರಕಾರವು ಸರಕಾರಿ ನೌಕರರ ಆರೋಗ್ಯ ಸಂರಕ್ಷಣೆ ಹಾಗೂ ಸಕಾಲದಲ್ಲಿ ಸಹಾಯಕ್ಕಾಗಿ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಅನುಷ್ಠಾನಕ್ಕೆ ತಂದಿದೆ. ಎಲ್ಲ ಸರಕಾರಿ ನೌಕರರು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಜಿಲ್ಲಾಧ್ಯಕ್ಷ ಎಸ್.ಎಫ್. ಸಿದ್ದನಗೌಡರ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯಲ್ಲಿ ನೌಕರರ ಕ್ರೀಡೆ, ಸಾಂಸ್ಕೃತಿಕ ಕಾರ್ಯಗಳಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಮಹಾನಗರ ಪಾಲಿಕೆಯಿಂದ ಅನುದಾನ, ಅಗತ್ಯ ಸೌಕರ್ಯಗಳನ್ನು ಪೂರೈಸಿ, ಪ್ರೋತ್ಸಾಹ ನೀಡಲಾಗುತ್ತಿದೆ. ನೌಕರರ ನಿರಂತರ ಶ್ರಮ ಹಾಗೂ ಕಾರ್ಯ ವೈಖರಿಯಿಂದ ಸರಕಾರಿ ಸೇವೆಗಳು ಸಾರ್ವಜನಿಕರಿಗೆ ತಲುಪುತ್ತಿವೆ. ನೌಕರರು ಶಿಸ್ತು, ಸಂಯಮದಿಂದ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಪೂರ್ಣಿಮಾ ನಾಯ್ಡು ಹಾಗೂ ವಿರೇಶ ಬ್ಯಾಹಟ್ಟಿ ಮಾತನಾಡಿದರು. ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸೊಲಗಿ ಸ್ವಾಗತಿಸಿದರು. ಜಿಲ್ಲಾ ಕಾರ್ಯದರ್ಶಿ ರಮೇಶ ಲಿಂಗದಾಳ ಕಾರ್ಯಕ್ರಮ ನಿರೂಪಿಸಿದರು. ಕ್ರೀಡಾ ಕಾರ್ಯದರ್ಶಿ ಸುರೇಶ ಜಟ್ಟೆನ್ನವರ ಕ್ರೀಡಾಪಟುಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಕ್ರೀಡಾ ಕಾರ್ಯದರ್ಶಿ ಪಿ.ಎಫ್. ಗುಡೆನಕಟ್ಟಿ ವಂದಿಸಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ ಭಾಗವಹಿಸಿ, ಕ್ರೀಡಾಪಟುಗಳಿಗೆ ಶುಭ ಹಾರೈಸಿದರು. ವೇದಿಕೆಯಲ್ಲಿ ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಧಾರವಾಡ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಂಗಾಧರ ಕಂದಕೂರ, ಭೂ ದಾಖಲೆಗಳ ಇಲಾಖೆ ಉಪನಿರ್ದೇಶಕ ಮೋಹನ ಶಿವಣ್ಣನವರ, ಧಾರವಾಡ ಗ್ರಾಮೀಣ ಮತ್ತು ಶಹರ ಕ್ಷೇತ್ರಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸದಾನಂದ ಅಮರಾಪುರ, ಸಂಘದ ಗೌರವಾಧ್ಯಕ್ಷ ಪ್ರಕಾಶ ಹಳಪೇಟ, ರಾಜ್ಯ ಪರಿಷತ್ ಸದಸ್ಯ ದೇವಿದಾಸ ಶಾಂತಿಕರ, ಖಜಾಂಚಿ ಮಂಜುನಾಥ ಯಡಹಳ್ಳಿ, ರಾಜ್ಯ ಸಂಘಟನಾ ಕಾರ್ಯದರ್ಶಿ ರಮೇಶ ಹೊಲ್ತಿಕೋಟಿ, ನೌಕರ ಸಂಘದ ತಾಲೂಕುಗಳ ಅಧ್ಯಕ್ಷರಾದ ವಿ.ಎಫ್. ಚುಳಕಿ, ಡಾ. ಪ್ರಲ್ಹಾದ ಗೆಜ್ಜಿ, ಜಗದೀಶ ವಿರಕ್ತಮಠ, ವಿಠ್ಠಲ ರಂಗಣ್ಣವರ, ಎಂ.ಎ. ತಹಸೀಲ್ದಾರ, ಮುತ್ತಪ್ಪ ಅಣ್ಣಿಗೇರಿ, ಹಿರಿಯ ಉಪಾಧ್ಯಕ್ಷರಾದ ರಾಜಶೇಖರ ಕೋನರಡ್ಡಿ, ರಾಜಶೇಖರ ಹೊನ್ನಪ್ಪನವರ, ಗಿರೀಶ ಚೌಡಕಿ, ಡಾ. ಸುರೇಶ ಹಿರೇಮಠ, ಮಿಲಿಂದಕುಮಾರ್ ಎಂ.ನಾಯ್ಕ, ಕ್ರೀಡಾ ಕಾರ್ಯದರ್ಶಿಗಳಾದ ಸುರೇಶ ಜಟ್ಟೆನ್ನವರ, ಪಿ.ಎಫ್. ಗುಡೇನಕಟ್ಟಿ, ಅಯ್ಯಪ್ಪ ಮೊಖಾಶಿ, ಸಾಂಸ್ಕೃತಿಕ ಕಾರ್ಯದರ್ಶಿಗಳಾದ ಪಿ.ಬಿ. ಕುರಬೆಟ್, ಚಂದ್ರಶೇಖರ ತಿಗಡಿ ಇದ್ದರು.

ಪ್ರಭಾರ ಜಿಲ್ಲಾಧಿಕಾರಿ ಭುವನೇಶ ಪಾಟೀಲ ಕ್ರೀಡಾಕೂಟದ ಧ್ವಜಾರೋಹಣ ನೇರವೇರಿಸಿದರು. ಮಹಾಪೌರರಾದ ಜ್ಯೋತಿ ಪಾಟೀಲ ಪಾರಿವಾಳ ಹಾರಿ ಬಿಟ್ಟರು. ಗ್ಯಾರಂಟಿ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಎಸ್.ಆರ್. ಪಾಟೀಲ ಕ್ರೀಡಾಪಟು ಯಲ್ಲೂನಾಯಕ ಹಮಾಣಿ ಅವರ ತಂಡದಿಂದ ಕ್ರೀಡಾಜ್ಯೋತಿ ಸ್ವೀಕರಿಸಿದರು.


> ಮಹಾಪೌರರಾದ ಜ್ಯೋತಿ ಪಾಟೀಲ ಮಾತನಾಡಿ, ಸರಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಸರಕಾರಿ ನೌಕರರ ಪಾತ್ರ ಮುಖ್ಯವಾಗಿದೆ. ಇಂದಿನ ಜನಕಲ್ಯಾಣ ಸರಕಾರಗಳು ಜನಸಾಮಾನ್ಯರ ಸಮಗ್ರ ಅಭಿವೃದ್ಧಿಗೆ ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿವೆ. ಅವುಗಳನ್ನು ಅರ್ಹರಿಗೆ ತಲುಪಿಸುವ ಮೂಲಕ ನಿಗದಿತ ಗುರಿ ಸಾಧಿಸಬೇಕು ಎಂದು ಹೇಳಿದರು.

# ಪುರಾತತ್ವ ಕ್ಷೇತ್ರದ ಹಿರಿಯ ತಜ್ಞ, ಲಕ್ಕುಂಡಿ ಉತ್ಖನನದ ನಿರ್ದೇಶಕ ಟಿ.ಎಂ. ಕೇಶವ್ ವಿಧಿವಶ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಪುರಾತತ್ವ ಇಲಾಖೆ (ASI)ಯ ನಿವೃತ್ತ ಸೂಪರಿಂಟೆಂಡಿಂಗ್ ಆರ್ಕಿಯಾಲಜಿಸ್ಟ್ ಹಾಗೂ ಲಕ್ಕುಂಡಿ ಉತ್ಖನನದ ನಿರ್ದೇಶಕರಾಗಿದ್ದ ಖ್ಯಾತ ಪುರಾತತ್ವ ತಜ್ಞ ಶ್ರೀ ಟಿ. ಎಂ. ಕೇಶವ್ ಅವರು ವಿಧಿವಶರಾಗಿದ್ದಾರೆ, ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವೇಳೆ ಅವರು ಕೊನೆಯುಸಿರೆಳೆದಿದ್ದಾರೆ.

1979ರಲ್ಲಿ ಪುರಾತತ್ವ ಇಲಾಖೆಗೆ ತಾಂತ್ರಿಕ ಸಹಾಯಕರಾಗಿ ಸೇವೆ ಪ್ರವೇಶಿಸಿದ ಟಿ.ಎಂ. ಕೇಶವ್ ಅವರು, ಅಜಂತಾ-ಎಲ್ಲೋರಾ ಗುಹೆಗಳು, ಹಂಪಿ, ಬಾದಾಮಿ, ಬನವಾಸಿ, ಹಾಲೇಬೀಡು, ಬೇಲೂರು, ಶ್ರವಣಬೆಳಗೊಳ ಸೇರಿದಂತೆ ದೇಶದ ಅನೇಕ ಪ್ರಮುಖ ಐತಿಹಾಸಿಕ ತಾಣಗಳ ಸಂಶೋಧನೆ, ಉತ್ಖನನ ಮತ್ತು ಸಂರಕ್ಷಣಾ ಕಾರ್ಯಗಳಲ್ಲಿ ಮಹತ್ವದ ಪಾತ್ರ ವಹಿಸಿದ್ದರು.



ಹಾಲೇಬೀಡಿನ ನಾಗರೇಶ್ವರ ದೇವಾಲಯ ಸಂಕೀರ್ಣ, ಬನವಾಸಿಯ ಬೌದ್ಧ ಸ್ತೂಪ, ಗುಡ್ನಾಪುರದ ಅರಮನೆ ಅವಶೇಷಗಳು, ಹಂಪಿಯ ವಿಜಯನಗರ ಕಾಲದ ಅರಮನೆಗಳ ಪತ್ತೆ ಸೇರಿದಂತೆ ಅನೇಕ ಅಪರೂಪದ ಐತಿಹಾಸಿಕ ಸಂಶೋಧನೆಗಳು ಅವರ ಸೇವಾ ಅವಧಿಯ ಪ್ರಮುಖ ಸಾಧನೆಗಳಾಗಿವೆ. ಕನಗನಹಳ್ಳಿ (ಸನ್ನತಿ)ಯಲ್ಲಿ ಮೌರ್ಯ-ಶಾತವಾಹನ ಕಾಲದ ಅತ್ಯಂತ ಪ್ರಾಚೀನ ಸ್ತೂಪದ ಉತ್ಖನನವೂ ಅವರ ನೇತೃತ್ವದಲ್ಲೇ ನಡೆದಿದೆ.

ಹೊಯ್ಸಳ, ಚಾಲುಕ್ಯ ಮತ್ತು ವಿಜಯನಗರ ಶೈಲಿಯ ವಾಸ್ತುಶಿಲ್ಪದಲ್ಲಿ ಅಪಾರ ಪರಿಣತಿ ಹೊಂದಿದ್ದ ಟಿ.ಎಂ. ಕೇಶವ್ ಅವರು, 50ಕ್ಕೂ ಹೆಚ್ಚು ಸಂಶೋಧನಾ ಲೇಖನಗಳು ಮತ್ತು ಗ್ರಂಥಗಳನ್ನು ರಚಿಸಿದ್ದರು. ಹಂಪಿ ವಿಶ್ವಪಾರಂಪರ್ಯ ತಾಣಕ್ಕೆ ಸಂಬಂಧಿಸಿದಂತೆ ಯುನೆಸ್ಕೊ ತಂಡಗಳೊಂದಿಗೆ ಕಾರ್ಯನಿರ್ವಹಿಸಿದ ಅನುಭವವೂ ಅವರದ್ದು.

ಇತ್ತೀಚೆಗೆ ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಎದುರು ನಡೆಯುತ್ತಿದ್ದ ಉತ್ಖನನ ಕಾರ್ಯವು ಅವರ ಮಾರ್ಗದರ್ಶನದಲ್ಲೇ ನಡೆಯುತ್ತಿತ್ತು. ಅವರ ನಿಧನದಿಂದ ಪುರಾತತ್ವ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಟಿ.ಎಂ. ಕೇಶವ್ ಅವರ ಅಗಲಿಕೆಗೆ ಲಕ್ಕುಂಡಿ ಪ್ರಾಧಿಕಾರದ ಆಯುಕ್ತರು, ಸಿಬ್ಬಂದಿ, ಪುರಾತತ್ವ ವಿದ್ವಾಂಸರು ಹಾಗೂ ಇತಿಹಾಸಾಸಕ್ತರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ಮುಟ್ಟಿನ ಆರೋಗ್ಯ ಮೂಲಭೂತ ಹಕ್ಕು, ಬದುಕುವ ಹಕ್ಕಿನ ಭಾಗ : ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುಟ್ಟಿನ ಆರೋಗ್ಯ ಸಂವಿಧಾನದ 21ನೇ ವಿಧಿಯಡಿ ಖಾತ್ರಿಪಡಿಸಿದ ಮೂಲಭೂತ ಹಕ್ಕು, ಬದುಕುವ ಹಕ್ಕಿನ ಭಾಗ ಎಂದು ಸುಪ್ರೀಂ ಕೋರ್ಟ್ ಶುಕ್ರವಾರ (ಜ.30) ಮಹತ್ವದ ತೀರ್ಪು ನೀಡಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆಗಳ 6 ರಿಂದ 12 ವರೆಗಿನ ವಿದ್ಯಾರ್ಥಿನಿಯರಿಗೆ ಉಚಿತ ಸ್ಯಾನಿಟರಿ ಪ್ಯಾಡ್‌ಗಳು ಲಭ್ಯವಾಗುವಂತೆ ನೋಡಿಕೊಳ್ಳಲು ಕೋರ್ಟ್ ನಿರ್ದೇಶಿಸಿದೆ.

**ವಂಚಿತ ಸಮುದಾಯದ ಮಹಿಳೆಯರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವಂತೆ ಆಗ್ರಹಿಸಿ ಮನವಿ**

# ಯೋಜನೆಗಳ ಕುರಿತು ಕಾರ್ಯಕ್ರಮಗಳನ್ನು ಆಯೋಜಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದಲ್ಲಿ ಸುಮಾರು 80ಕ್ಕೂ ಹೆಚ್ಚು ಕೊಳಗೇರಿ ಪ್ರದೇಶಗಳಿದ್ದು, 40 ಸಾವಿರಕ್ಕೂ ಹೆಚ್ಚು ಸ್ಲಂ ನಿವಾಸಿಗಳು ಕನಿಷ್ಟಮಟ್ಟದ ಸೌಲಭ್ಯಗಳೂ ಇಲ್ಲದೇ ಬದುಕು ನಡೆಸುತ್ತಿದ್ದಾರೆ. ವಿಶೇಷವಾಗಿ ನಗರದ ಸ್ಲಂ ಪ್ರದೇಶದ ಮಹಿಳೆಯರಿಗೆ ಸರ್ಕಾರದ ಯಾವುದೇ ಸೌಲಭ್ಯಗಳು ಸಿಗದೇ ಯೋಜನೆಗಳಿಂದ ವಂಚಿತರಾಗಿದ್ದಾರೆ. ಕೂಡಲೇ ನಗರದ ವಂಚಿತ ಸಮುದಾಯದ ಮಹಿಳೆಯರಿಗೆ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡಬೇಕೆಂದು ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಪದಾಧಿಕಾರಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಸಮಿತಿ ಅಧ್ಯಕ್ಷರಾದ ಪರವೀನಬಾನು ಹವಾಲ್ದಾರ ಮಾತನಾಡಿ, ನಗರದ ಸ್ಲಂ ಪ್ರದೇಶದ ಮಹಿಳೆಯರು ಮನೆಗೆಲಸ, ಟೇಲರಿಂಗ್ ಕೆಲಸ, ಚಿಂದಿ ಆಯುವ ಕೆಲಸ, ಕಟ್ಟಡ ಕಾರ್ಮಿಕರು, ವ್ಯಾಪಾರ ಮಾಡುತ್ತ ಶ್ರಮಜೀವಿಗಳಾಗಿ ಬದುಕುತ್ತಿದ್ದಾರೆ. ಸ್ಲಂ ಪ್ರದೇಶದಲ್ಲಿ ಅಸಂಘಟಿತ ಕಾರ್ಮಿಕ ಮಹಿಳೆಯರು ಹೆಚ್ಚು ವಾಸವಾಗಿದ್ದಾರೆ. ವಂಚಿತ ಮಹಿಳೆಯರಿಗೆ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಅನೇಕ ಬಾರಿ ಇಲಾಖೆಯಲ್ಲಿ ಅರ್ಜಿಗಳನ್ನು ಸಲ್ಲಿಸಿದರೂ ಸಹ ಅಧಿಕಾರಿಗಳು ಯೋಜನೆಗಳನ್ನು ನೀಡುವಲ್ಲಿ ತಾರತಮ್ಯ ನೀತಿ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿದರು.

ಮಹಿಳೆಯರಿಗೆ ಸರ್ಕಾರದ ಯೋಜನೆಗಳನ್ನು ಮಂಜೂರು ಮಾಡಲು ಸಾಕಷ್ಟು ಬಾರಿ ಮನವಿ ನೀಡಿದರೂ ಸಹ ಅಧಿಕಾರಿಗಳು ಸರಿಯಾಗಿ ಸ್ಪಂದಿಸುತ್ತಿಲ್ಲ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸಿಗುವ ಸರ್ಕಾರದ ಯೋಜನೆಗಳನ್ನು ಅಧಿಕಾರಿಗಳು ಮಧ್ಯವರ್ತಿಗಳಿಗೆ ಅವಕಾಶ ನೀಡದೇ ನೇರವಾಗಿ ಗದಗ-ಬೆಟಗೇರಿ ಸ್ಲಂ ಪ್ರದೇಶದಲ್ಲಿ ವಾಸವಾಗಿರುವ ಅಸಂಘಟಿತ ಕಾರ್ಮಿಕರಿಗೆ ಸಿಗುವಂತೆ ವ್ಯವಸ್ಥೆ ಮಾಡಬೇಕು. ಇಲಾಖೆಯಲ್ಲಿ ಸಿಗುವ ಸರ್ಕಾರದ ವಿವಿಧ ಯೋಜನೆಗಳ ಕುರಿತು ಗದಗ-ಬೆಟಗೇರಿ ನಗರದ ಸ್ಲಂ ಪ್ರದೇಶದಲ್ಲಿ ಮಾಹಿತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದು ಹೇಳಿದರು.

ಒಂದು ವೇಳೆ ನಮ್ಮ ಮನವಿಗೆ ಅಧಿಕಾರಿಗಳು ಪ್ರಮಾಣಿಕವಾಗಿ ಸ್ಪಂದಿಸಿ ಸ್ಲಂ ಪ್ರದೇಶದಲ್ಲಿ ವಾಸಿಸುತ್ತಿರುವ ಅಸಂಘಟಿತ ಕಾರ್ಮಿಕರಿಗೆ ವಿಶೇಷ ಆದ್ಯತೆ ನೀಡಿ ಯೋಜನೆಗಳನ್ನು ಮಂಜೂರು ಮಾಡದೇ ಇದ್ದಲ್ಲಿ ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿಯೆದುರು ಅನ್ಯಾಯಕ್ಕೆ ಒಳಗಾದ ಸಾವಿರಾರು ಮಹಿಳೆಯರೊಂದಿಗೆ ಪ್ರತಿಭಟನೆ ನಡೆಸಲಾಗುವುದೆಂದು ಮನವಿ ಮೂಲಕ ಎಚ್ಚರಿಸಿದರು.

ಮನವಿ ನೀಡುವ ಸಂದರ್ಭದಲ್ಲಿ ಮಹಿಳಾ ಸಮಿತಿ ಉಪಾಧ್ಯಕ್ಷೆ ವಿಶಾಲಾಕ್ಷಿ ಹಿರೇಗೌಡ್ರ, ಮೆಹರುನಿಸಾ ಡಂಬಳ, ಕಾರ್ಯದರ್ಶಿ ಫೈರುಜಾ ಗುಳಗುಂದಿ, ಸಹ ಕಾರ್ಯದರ್ಶಿ ರೂಪಾ ಕಬಾಡಿ, ಮೈಮುನ ಬೈರಕದಾರ, ನಜಮುನಿಸಾ ಮುರಗೋಡ, ಪ್ರೇಮಾ ಮಣ್ಣವಡ್ಡರ, ಸಾಕ್ರುಬಾಯಿ ಗೋಸಾವಿ, ಗಿರಜವ್ವ ವಡ್ಡಟಿ, ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ, ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಶರಣಪ್ಪ ಸೂಡಿ, ಸಲೀಂ ಹರಿಹರ, ಗೌಸಸಾಬ ಅಕ್ಕಿ ಹಾಗೂ ಗದಗ-ಬೆಟಗೇರಿ ನಗರದ ವಿವಿಧ ಸ್ಲಂ ಪ್ರದೇಶದ ನೂರಾರು ಮಹಿಳೆಯರು ಉಪಸ್ಥಿತರಿದ್ದರು.

> ಇಲಾಖೆಯ ಉಪನಿರ್ದೇಶಕರು ಮನವಿ ಸ್ವಿಕರಿಸಿ ಮಾತನಾಡಿ, ಇಲಾಖೆಯಿಂದ ನೀಡಲಾಗುವ ಸರ್ಕಾರದ ಯೋಜನೆಗಳ ಕುರಿತು ಸಂಘಟನೆಯ ಸಹಕಾರದಲ್ಲಿ ಸ್ಲಂಗಳಲ್ಲಿ ಮಾಹಿತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಮಧ್ಯವರ್ತಿಗಳಿಗೆ ಅವಕಾಶ ನೀಡದೇ ಫಲಾನುಭವಿಗಳು ನೇರವಾಗಿ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬೇಕೆಂದು ಹೇಳಿದರು.

# ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಧನೆ ಎನ್ನುವದು ಸಾಧಕನ ಸ್ವತ್ತಾಗಿದೆ. ಆದರೆ, ಸಾಧನೆ ಮಾಡುವ ಛಲ ವಿದ್ಯಾರ್ಥಿಗಳಲ್ಲಿ ಬರಬೇಕು. ಅದಕ್ಕಾಗಿ ಪ್ರತಿಯೊಬ್ಬ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಬೇಕು, ವಿದ್ಯಾರ್ಥಿಗಳಲ್ಲಿ ಸಾಧನೆ ಮಾಡಬೇಕೆಂಬ ಹಂಬಲ ಬೇಕು ಎಂದು ನಿವೃತ್ತ ಪ್ರಾಧ್ಯಾಪಕ ಡಾ. ಎನ್.ಎಚ್. ಪೂಜಾರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಬಿ.ಸಿ.ಎನ್ ವಿಜನ್ ಕಲಾ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ವಾರ್ಷಿಕೋತ್ಸವ ಹಾಗೂ ಸ್ಮರಣ ಸಂಚಿಕೆ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಶ್ರಮ ಪಟ್ಟು ಓದುವ, ನಿರಂತರ ಅಧ್ಯಯನದ ಮೂಲಕ ಸಾಮಾನ್ಯರ ಗುಂಪಿನಿಂದ ಸಾಧಕರ ಗುಂಪಿಗೆ ಸೇರಬೇಕು. ಏಕಾಗ್ರತೆ ಮತ್ತು ಯೋಜನಾಬದ್ಧವಾಗಿ ತಯಾರಿ ಮಾಡಿಕೊಳ್ಳಬೇಕು. ಮುಂಬರುವ ಪರೀಕ್ಷೆಗೆ ಉತ್ತಮ ತಯಾರಿ ನಡೆಸಿ ಒಳ್ಳೆಯ ಫಲಿತಾಂಶ ಪಡೆದುಕೊಳ್ಳಿ. ಜೀವನವನ್ನು ಸುಲಭವಾಗಿ ತೆಗೆದುಕೊಳ್ಳೂವದು ಬೇಡ, ಇರುವ ಕಡಿಮೆ ಅವಧಿಯಲ್ಲಿ ಉತ್ತಮ ಸಾಧನೆ ಮಾಡುವ ಗುರಿಯನ್ನು ಮುಟ್ಟಿ ಎಂದು ಸಲಹೆ ನೀಡಿದರು.

ಸಂಸ್ಥೆಯ ಕಾರ್ಯದರ್ಶಿ ಲೋಹಿತ್ ನೆಲವಿಗಿ ಮಾತನಾಡಿ, ರಾಜ್ಯಮಟ್ಟದಲ್ಲಿ ಸ್ಪರ್ಧೆ ಮಾಡುವ ನಿಟ್ಟಿನಲ್ಲಿ ಮಕ್ಕಳು ಪರೀಕ್ಷೆಗೆ ಸಿದ್ಧರಾಗಬೇಕು. ಧೈರ್ಯದಿಂದ, ಶಾಂತ ಮನಸ್ಸಿನಿಂದ ಪರೀಕ್ಷೆ ಎದುರಿಸಿ ಉತ್ತಮ ಸಾಧನೆ ಮಾಡಿ. ಇಂದಿನ ಯಶಸ್ಸು ಮುಂದಿನ ಶೈಕ್ಷಣಿಕ ಜೀವನಕ್ಕೆ ಮಾರ್ಗದರ್ಶಿಯಾಗಲಿದೆ. ನಾನು ಮಾಡಬಲ್ಲೆ ಎನ್ನುವ ಧನಾತ್ಮಕ ಯೋಚನೆ ಮಾಡಿದರೆ ಅದು ಗುರಿ ಮುಟ್ಟಲು ಮೆಟ್ಟಿಲಾಗುವದು ಎಂದು ಹೇಳಿದರು.

ಶಿಕ್ಷಣಶಾಸ್ತ್ರ ಉಪನ್ಯಾಸಕಿ ಪ್ರೇಮಾ ಗೊನ್ನೆನ್ನವರ ಅವರ ಸಂಪಾದಕತ್ವದಲ್ಲಿ ಸಿದ್ಧಪಡಿಸಲಾದ 'ನವಸ್ಫೂರ್ತಿ' ಸ್ಮರಣ ಸಂಚಿಕೆ ಬಿಡುಗಡೆಗೊಳಿಸಲಾಯಿತು. ಪ್ರಾಚಾರ್ಯ ಡಿ.ಎಸ್. ಪ್ಯಾಟಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಉಪನ್ಯಾಸಕಿ ಪ್ರೇಮಾ ಗೋನೆನ್ನವರ ವಾರ್ಷಿಕ ವರದಿಯನ್ನು ವಾಚಿಸಿದರು. ರೋಹಿತ ಯಲವಗಿ ಸ್ವಾಗತಿಸಿದರು. ರಶ್ಮಿ ಮೇಲಗಿರಿ ನಿರೂಪಿಸಿದರು. ಅಕ್ಷತಾ ಹಡಪದ ಪರಿಚಯಿಸಿದರು, ಭಾರತಿ ಹೆಗ್ಗಣ್ಣವರ ವಂದಿಸಿದರು.

ಮಂಜುನಾಥ್ ಮಾಗಡಿ, ಸಿದ್ದಪ್ಪ ಮಾಯರ, ವಿಜಯಕುಮಾರ, ಅರುಣ ಬೇಲೇರಿ, ಭೋಧ-ಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

# ಲಕ್ಕುಂಡಿ ಉತ್ಖನನ ಸ್ಥಳದಲ್ಲಿ ನಿಜ ಹಾವು ಪತ್ತೆ: ಮೂರು ಹೆಡೆ ನಾಗರ ಶಿಲೆಯ ಬಳಿಕ ಮತ್ತೊಂದು ಅಚ್ಚರಿ"

■ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಲಕ್ಕುಂಡಿಯ ಉತ್ಖನನ ಸ್ಥಳದಲ್ಲಿ ನಿಜವಾದ ಹಾವು ಪತ್ತೆಯಾಗಿರುವ ಘಟನೆ ತೀವ್ರ ಕುತೂಹಲ ಹಾಗೂ ಆತಂಕಕ್ಕೆ ಕಾರಣವಾಗಿದೆ. ಲಕ್ಕುಂಡಿ ಉತ್ಖನನ ಪ್ರದೇಶದ ಬ್ಲಾಕ್‌ಎ ವಿಭಾಗದಲ್ಲಿ ಹಾವು ಪತ್ತೆಯಾಗಿದ್ದು, ಸ್ಥಳೀಯರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ.

ಗುರುವಾರ ಮಾತ್ರ ಉತ್ಖನನ ಸ್ಥಳದಲ್ಲಿ ಮೂರು ಹೆಡೆಗಳಿರುವ ನಾಗರ ಶಿಲೆ ಪತ್ತೆಯಾಗಿತ್ತು. ಅದರ ಬೆನ್ನಲ್ಲೇ ಇದೀಗ ನಿಜವಾದ ಹಾವು ಪತ್ತೆಯಾಗಿರುವುದು ಹಲವು ಅನುಮಾನಗಳು ಮತ್ತು ಚರ್ಚೆಗಳಿಗೆ



ಕಾರಣವಾಗಿದೆ. ಈ ಬೆಳವಣಿಗೆ ಲಕ್ಕುಂಡಿಯ ಉತ್ಖನನ ಕಾರ್ಯಕ್ಕೆ ಮತ್ತಷ್ಟು ಮಹತ್ವ ತಂದಿದೆ.

ಹಾವು ಪತ್ತೆಯಾದ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯರು ಹಾಗೂ ಉತ್ಖನನ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿಯಲ್ಲಿ ಆತಂಕ ಹೆಚ್ಚಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಐತಿಹಾಸಿಕ ಹಿನ್ನೆಲೆ ಹೊಂದಿರುವ ಲಕ್ಕುಂಡಿಯಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯದ ನಡುವೆ ಇಂತಹ ಬೆಳವಣಿಗೆಗಳು ಸ್ಥಳೀಯರ ಗಮನ ಸೆಳೆಯುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೇನು ಅಚ್ಚರಿಗಳು ಎದುರಾಗಲಿವೆ ಎಂಬ ಪ್ರಶ್ನೆ ಉದ್ಭವಿಸಿದೆ.

# ಅತ್ಯಾಚಾರ ಪ್ರಕರಣದಲ್ಲಿ ಎಸ್‌ಪಿ ನಾಯಕ ಮೊಯಿದ್ ಖಾನ್ ಖುಲಾಸೆ: ಬಂಧನದ ಎರಡು ವರ್ಷಗಳ ನಂತರ ಬುಲ್ಡೋಜರ್ ನಿಂದ ಮನೆ ಕೆಡವಿದ್ದ ಯೋಗಿ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

2024 ರಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಸಮಾಜವಾದಿ ಪಕ್ಷದ ನಾಯಕ ಮೊಯಿದ್ ಖಾನ್ ಅವರನ್ನು ಉತ್ತರ ಪ್ರದೇಶದ ಅಯೋಧ್ಯೆಯ ಪೋಕ್ಸೋ ನ್ಯಾಯಾಲಯವು ಖುಲಾಸೆಗೊಳಿಸಿದೆ. ಅಪ್ರಾಪ್ತ ಬಾಲಕಿಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಅವರನ್ನು ಅಪರಾಧಕ್ಕೆ ಲಿಂಕ್ ಮಾಡಲು ಡಿಎನ್‌ಎ ಪುರಾವೆಗಳು ವಿಫಲವಾದ ಕಾರಣ ಮತ್ತು ಪ್ರಾಸಿಕ್ಯೂಷನ್ ಆರೋಪಗಳನ್ನು ಸಾಬೀತುಪಡಿಸಲು ಸಾಧ್ಯವಾಗದ ಕಾರಣ ಅವರನ್ನು ಖುಲಾಸೆಗೊಳಿಸಲಾಗಿದೆ ಎಂದು ಮಕ್ತೂಬ್ ಮೀಡಿಯಾ ವರದಿ ಮಾಡಿದೆ.

### ಸದುಪಯೋಗವಾಗದೇ ಧೂಳು ತಿನ್ನುತ್ತಿರುವ ಪೊಲೀಸ್ ಕಣ್ಗಾವಲು ಗೋಪುರ

# ಬಳಕೆಗಿಲ್ಲದ ವಾಚಿಂಗ್ ಟವರ್‌ಗೆ ಸಿಬ್ಬಂದಿ ಕೊರತೆ ನೆಪ!




ಈ ಕುರಿತು ಸಿಪಿಐ ಬಿ.ವಿ. ನ್ಯಾಮಗೌಡ ಅವರನ್ನು ಸಂಪರ್ಕಿಸಲಾಗಿ, ಸಿಬ್ಬಂದಿಗಳ ಕೊರತೆಯಿಂದ ಪೊಲೀಸ್ ಕಣ್ಗಾವಲು ಗೋಪುರಗಳನ್ನು ಬಳಸಲಾಗಿಲ್ಲ. ಈ ಬಗ್ಗೆ ಚರ್ಚಿಸಿ ಗೋಪುರ ದುರಸ್ಥಿ ಮಾಡಿಸಿ ಬಣ್ಣ ಹಚ್ಚಿ, ಸಿಬ್ಬಂದಿ ನೇಮಿಸಿ ಕಾರ್ಯ ನಿರ್ವಹಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರತಿಕ್ರಿಯಿಸಿದ್ದಾರೆ.

**■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಪಟ್ಟಣದಲ್ಲಿ ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ನಿರ್ಮಿಸಿದ್ದ ಪೊಲೀಸ್ ಕಣ್ಗಾವಲು ಗೋಪುರ/ಪೊಲೀಸ್ ವಾಚಿಂಗ್ ಟವರ್ ಹಲವು ವರ್ಷಗಳಿಂದ ಉಪಯೋಗಿಸದೇ ಧೂಳು ತಿನ್ನುತ್ತಿದೆ.

ಗದಗ ಜಿಲ್ಲೆಯಲ್ಲಿಯೇ ಶೈಕ್ಷಣಿಕ, ಧಾರ್ಮಿಕ, ಔದ್ಯೋಗಿಕವಾಗಿ ಶೀಘ್ರಗತಿಯಲ್ಲಿ ಬೆಳೆಯುತ್ತಿರುವ ಲಕ್ಮೇಶ್ವರ ಪಟ್ಟಣದಲ್ಲಿ ದಿನೇ ದಿನೇ ಟ್ರಾಫಿಕ್ ಸಮಸ್ಯೆ ಹೆಚ್ಚುತ್ತಿದೆ. ಲಕ್ಮೇಶ್ವರ ಪಟ್ಟಣ ನೆರೆಯ ಕುಂದಗೋಳ, ಶಿರಹಟ್ಟಿ, ಗದಗ, ಸವಣೂರ, ಶಿಗ್ಗಾಂವ, ಹಾವೇರಿ ತಾಲೂಕಿನ ಜನರಿಗೆ ಕೇಂದ್ರ ಸ್ಥಳವಾಗಿದ್ದರಿಂದ ವ್ಯಾಪಾರ, ಉದ್ಯೋಗ, ಶಿಕ್ಷಣ ಹೀಗೆ ಅನೇಕ ಕಾರಣಗಳಿಗಾಗಿ ಪಟ್ಟಣಕ್ಕೆ ಆಗಮಿಸುತ್ತಾರೆ. ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯೂ ಪಟ್ಟಣದಲ್ಲಿಯೇ ಹಾದು ಹೋಗಿದ್ದರಿಂದ ವಾಹನ ದಟ್ಟಣೆಯೂ ಹೆಚ್ಚಿರುತ್ತದೆ. ಅಲ್ಲದೇ ಮರಳು, ಮಣ್ಣು, ಎಂಸ್ಯಾಂಡ್, ಖಡಿ ಸಾಗಿಸುವ ವಾಹನಗಳು ಸಾಲುಗಟ್ಟಿರುತ್ತವೆ. ಇಂಜಿನಿಯರಿಂಗ್, ಪದವಿ, ಡಿಪ್ಲೋಮಾ, ಐಟಿಐ ಸೇರಿ ಕಾಲೇಜುಗಳು, ಹತ್ತಾರು ಶಾಲೆಗಳ ವಿದ್ಯಾರ್ಥಿಗಳು ಬರುತ್ತಾರೆ. ಬೆಳಿಗ್ಗೆಯಿಂದ ರಾತ್ರಿವರೆಗೂ ಮುಖ್ಯ ರಸ್ತೆಗಳು, ಮಾರುಕಟ್ಟೆ ರಸ್ತೆಗಳು ಜನ-ವಾಹನ ದಟ್ಟಣೆಯಿಂದ ಕೂಡಿರುತ್ತವೆ.

ಈ ನಿಟ್ಟಿನಲ್ಲಿ ಸಂಚಾರ ದಟ್ಟಣೆ-ಯ ಜೊತೆಗೆ ಅಪಘಾತ, ಕಳ್ಳತನ, ಅಕ್ರಮ ಸಾಗಾಟ, ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಯುವ ಮತ್ತು ನಿಗಾ ವಹಿಸುವ ನಿಟ್ಟಿನಲ್ಲಿ ಈ ಹಿಂದೆ ಲಕ್ಮೇಶ್ವರ ಠಾಣೆ-ಯ ಪಿಎಸ್‌ಐ ಆಗಿದ್ದ ರವಿಚಂದ್ರ ಬಡಫಕ್ಕೀರಪ್ಪನವರ ಸಾರ್ವಜನಿಕರ ಸಹಕಾರದಿಂದ ಲಕ್ಷಾಂತರ ರೂ ಖರ್ಚು ಮಾಡಿ ಟ್ರಾಫಿಕ್ ಸಮಸ್ಯೆ ಇರುವ ಪಟ್ಟಣದ ಶಿಗ್ಲಿ ನಾಕಾ ಮತ್ತು ದೂದಪೀರಾಂ ದರ್ಗಾದಲ್ಲಿ ಪೊಲೀಸ್ ಕಣ್ಗಾವಲು ಗೋಪುರಗಳ ವ್ಯವಸ್ಥೆ ಮಾಡಿದ್ದರು. ಇದರಲ್ಲಿ ಸಿಸಿ ಕ್ಯಾಮರಾ, ಧ್ವನಿವರ್ಧಕ, ಫ್ಯಾನ್, ಖುರ್ಚಿ ಸೇರಿ ಟ್ರಾಫಿಕ್ ಪೊಲೀಸರಿಗೆ ಅಗತ್ಯವಾಗಿದ್ದ ಎಲ್ಲ ವ್ಯವಸ್ಥೆ ಮಾಡಿದ್ದರು. ಸರದಿಯಂತೆ ಸಿಬ್ಬಂದಿ ನೇಮಿಸಿ ದಿನವೂ ಅತ್ಯಂತ ವ್ಯವಸ್ಥಿತವಾಗಿ ಸಂಚಾರ ದಟ್ಟಣೆ ನಿಯಂತ್ರಿಸಲಾಗುತ್ತಿತ್ತು. ಅಲ್ಲದೇ ಸವಾರರಿಗೆ ರಸ್ತೆ ನಿಯಮಗಳನ್ನು ತಿಳಿಸಿ ಜಾಗೃತಿ ಮೂಡಿಸುವ ಮತ್ತು ದಂಡ ವಿಧಿಸುವ ಕಾರ್ಯ ಮಾಡಲಾಗುತ್ತಿತ್ತು.



ಅದರೆ ಠಾಣೆಯ ಪಿಎಸ್‌ಐ ವರ್ಗಾವಣೆಗೊಂಡ ನಂತರ ಈ ಪೊಲೀಸ್ ಕಣ್ಗಾವಲು ಗೋಪುರಗಳು ನಿಷ್ಕ್ರಿಯಗೊಂಡವು. ಶಿಗ್ಲಿ ನಾಕಾದಲ್ಲಿದ್ದ ಟಾವರ್ ಹೊಸ ಬಸ್ ನಿಲ್ದಾಣದ ಶೌಚಾಲಯದ ಹತ್ತಿರ ಬಿಸಾಡಲಾಗಿತ್ತು. ಇತ್ತೀಚೆಗಷ್ಟೇ ಶಿಗ್ಲಿ ನಾಕಾದಲ್ಲಿ ರೈತರು ಸೇರಿ ವಿವಿಧ ಸಂಘಟನೆಯವರು ಅನಿರ್ಧಿಷ್ಟಾವಧಿ ಪ್ರತಿಭಟನೆ, ಹೋರಾಟ ಮಾಡುತ್ತಿರುವುದನ್ನು ತಪ್ಪಿಸುವ ಉದ್ದೇಶದಿಂದ ಎಲ್ಲೋ ಧೂಳು ತಿನ್ನುತ್ತಾ ಬಿದ್ದಿದ್ದ ಗೋಪುರವನ್ನು ತಂದು ನಿಲ್ಲಿಸಲಾಗಿದೆ. ಬದಲಾಗಿ ಟ್ರಾಫಿಕ್ ನಿಯಂತ್ರಣದ ಉದ್ದೇಶಕ್ಕಲ್ಲ ಎಂಬುದು ವಿಷಾದದ ಸಂಗತಿ. ಇನ್ನಾದರೂ ಅತ್ಯಂತ ಅಗತ್ಯವಿರುವ ಈ ಪೊಲೀಸ್ ಕಣ್ಗಾವಲು ಗೋಪುರ ಮತ್ತೆ ಕಾರ್ಯ ನಿರ್ವಹಿಸುವಂತಾಗಬೇಕು. ಟ್ರಾಫಿಕ್ ಸಮಸ್ಯೆ, ಓವರ್ ಲೋಡ್ ಸಾಗಾಣಿಕೆ, ಅಪಘಾತ ತಡೆಗಟ್ಟುವ ಕ್ರಮಕ್ಕೆ ಮುಂದಾಗಬೇಕು.

ಈ ನಿಟ್ಟಿನಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಸಿಪಿಐ, ಪಿಎಸ್‌ಐ ತುರ್ತು ಗಮನ ಹರಿಸಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

## ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮಾಧಿಕಾರಿಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಭವನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ 'ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ-2026' ಅಂಗವಾಗಿ ಕಾರ್ಯಕ್ರಮ ಜರುಗಿತು.



ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ ಮತ್ತು ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿ ಡಾ. ಅರುಂದತಿ ಕುಲಕರ್ಣಿ ಮತ್ತು ಜಿಲ್ಲಾ ಯೋಜನಾ ಆಬಿವೃದ್ಧಿ ಅಧಿಕಾರಿ ಡಾ. ಹೆಚ್.ಎಲ್. ಗಿರಡ್ಡಿ ಉದ್ಘಾಟಿಸಿದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಅರುಂದತಿ ಕುಲಕರ್ಣಿ ಮಾತನಾಡಿ, ಕುಷ್ಠರೋಗ ಹರಡುವ ವಿಧಾನ, ರೋಗದ ಲಕ್ಷಣಗಳು ಹಾಗೂ ಚಿಕಿತ್ಸೆಯ ಬಗ್ಗೆ ಹಾಗೂ 'ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಕಾಪಾಡುವುದು' ಎಂಬ ಈ ವರ್ಷದ ಘೋಷವಾಖ್ಯದ ಬಗ್ಗೆ ಮಾತನಾಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹುತಾತ್ಮರಾದ ದಿನದ ಅಂಗವಾಗಿ 30-01-2026ರಿಂದ 13-02-2026ರವರೆಗೆ ಈ ಕಾರ್ಯಕ್ರಮವನ್ನು ಎಲ್ಲಾ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಯಾ ಮುಖ್ಯಸ್ಥರೊಂದಿಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸುವುದರ ಮುಖಾಂತರ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.


ಡಾ. ಹೆಚ್.ಎಲ್. ಗಿರಡ್ಡಿ ಅವರು 'ಸ್ಪರ್ಶ ಕುಷ್ಠರೋಗ ಅರಿವು ಅಭಿಯಾನ-2026'ರ ಪ್ರತಿಜ್ಞಾ ವಿಧಿ ಬೋಧಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ್ ಚವ್ಹಾಣ ಕಾರ್ಯಕ್ರಮ ನಿರೂಪಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎಸ್. ಕುಬಸದ ವಂದಿಸಿದರು.

## ರಾಜ್ಯ ಮಹಿಳಾ ಉಪಾಧ್ಯಕ್ಷರಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣಗಳ ಕಾರ್ಮಿಕರ ಟ್ರೇಡ್ ಯೂನಿಯನ್ ವತಿಯಿಂದ ಜರುಗಿದ ಸಾಮಾನ್ಯ ಸಭೆಯಲ್ಲಿ ಕಾರ್ಮಿಕರ ಕಾರ್ಡ್‌ಗಳನ್ನು ಮಾಡುವದು ಮತ್ತು ಸರ್ಕಾರದಿಂದ ಸಿಗುವ ಸೌಲಭ್ಯಗಳ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಮಹಿಳಾ ಉಪಾಧ್ಯಕ್ಷೆ ಕೆ.ಯು. ನಾಗವೇಣಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಂ.ಡಿ. ನಾಗರಾಜ, ಮುಂಡರಗಿ ಕಾರ್ಮಿಕ ಅಧಿಕಾರಿ ಭಾಗ್ಯವಂತ ಪತ್ತಾರ, ರಾಜ್ಯ ಉಪಾಧ್ಯಕ್ಷ ವಿಜಯ ನರಸಿಂಹ, ಗದಗ ಜಿಲ್ಲಾಧ್ಯಕ್ಷ ಮಹಮ್ಮದಅಲಿ ಭಾವಾಜಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೋಹನ ಇಮರಾಪೂರ, ಜಿಲ್ಲಾ ಉಪಾಧ್ಯಕ್ಷ ಸುರೇಶ ಕುಂಬಾರ, ಮುಂಡರಗಿ ತಾಲೂಕಾಧ್ಯಕ್ಷ ಕನಕರಾಜ ಗಡಾದ ಮುಂತಾದವರು ಉಪಸ್ಥಿತರಿದ್ದರು.



## ಕಿಮ್ಸ್ ಅಧಿಕಾರಿ ಕಲ್ಲೇಶ್ ನಿವಾಸ, ಕಾಲೇಜ್ ಸೇರಿ ಆರು ಕಡೆ ಲೋಕಾಯುಕ್ತ ದಾಳಿ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ವಾಲ್ಮೀಕಿ ನಿಗಮದ ಹಗರಣದಲ್ಲಿ ಸುದ್ದಿಯಾಗಿದ್ದ ಪ್ರಸ್ತುತ ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆ (ಕಿಮ್ಸ್) ಆಡಳಿತಾಧಿಕಾರಿ ಬಿ.ಕಲ್ಲೇಶ್ ಅವರ ಮನೆ ಹಾಗೂ ಭಾಗ್ಯನಗರದ ಯತ್ನಟ್ಟಿ ರಸ್ತೆಯ ನವಚೇತನ ಪಿಯು ವಿಜ್ಞಾನ ಕಾಲೇಜು ಸೇರಿದಂತೆ ಆರು ಕಡೆ ಲೋಕಾಯುಕ್ತ ದಾಳಿ ನಡೆದಿದೆ.

ಶುಕ್ರವಾರ ಬೆಳ್ಳಂಬೆಳಗ್ಗೆ 30 ಜನರ ಲೋಕಾಯುಕ್ತ ತಂಡ ಏಕಕಾಲಕ್ಕೆ ಕಲ್ಲೇಶ್ ಅವರಿಗೆ ಸಂಬಂಧಿಸಿದ ಆರು ಕಡೆ ದಾಳಿ ನಡೆಸಿದ್ದು, ದಾಖಲೆ ಪರಿಶೀಲನೆ ನಡೆಸುತ್ತಿದೆ. ಹಾವೇರಿ, ರಾಯಚೂರು, ಗದಗ ಜಿಲ್ಲೆಯಿಂದ 7 ವಾಹನಗಳಲ್ಲಿ ಲೋಕಾಯುಕ್ತ ತಂಡ ಆಗಮಿಸಿ ದಾಳಿ ನಡೆಸಿದೆ ಎಂದು ಪ್ರಾಥಮಿಕ ಮೂಲಗಳು ತಿಳಿಸಿವೆ. ಈ ಹಿಂದೆ ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ಅಮಾನತುಗೊಂಡಿದ್ದ ಬಿ.ಕಲ್ಲೇಶ್ ಹಗರಣದ ವೇಳೆ ಸಿಎಂ ಹೆಸರು ಹೇಳುವಂತೆ ಇಡಿ ಅಧಿಕಾರಿಗಳು ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದರು. ಭ್ರಷ್ಟಾಚಾರ ಹಾಗೂ ಅಕ್ರಮ ಆಸ್ತಿ ಸಂಪಾದನೆ ಸೇರಿ ಹಲವು ಆರೋಪ ಹಿನ್ನೆಲೆಯಲ್ಲಿ ಲೋಕಾಯುಕ್ತ ದಾಳಿ ನಡೆದಿದೆ ಎನ್ನಲಾಗಿದೆ.

## ಬಿಸಿಯೂಟದಲ್ಲಿ ಹಲ್ಲಿ: 50ಕ್ಕೂ ಅಧಿಕ ಮಕ್ಕಳು ಅಸ್ವಸ್ಥ





"ಚಿಕ್ಕಬನ್ನಿಗೋಳ ಶಾಲೆಯ ಮಕ್ಕಳು ಅಸ್ವಸ್ಥಗೊಂಡಿದ್ದು ಗಮನಕ್ಕೆ ಬಂದಿದೆ. ಸ್ಥಳಕ್ಕೆ ವೈದ್ಯರನ್ನು ಕಳುಹಿಸಲಾಗಿದೆ. ಚಿಕಿತ್ಸೆ ನೀಡಲಾಗುತ್ತದೆ. ಯಾವುದೇ ಅಪಾಯವಿಲ್ಲ, ಘಟನೆಗೆ ತನಿಖೆ ನಡೆಸಲು ತಂಡ ರಚಿಸಿ ಕ್ರಮಕ್ಕೆ ಮುಂದಾಗಲಾಗುವುದು.

**– ಅಶೋಕ ಗೌಡರ್,** ಬಿಇಒ ಯಲಬುರ್ಗಾ.

**■ವಿಜಯಸಾಕ್ಷಿ ಸುದ್ದಿ, ಯಲಬುರ್ಗಾ**

ತಾಲೂಕಿನ ಚಿಕ್ಕಬನ್ನಿಗೋಳ ಗ್ರಾಮದಲ್ಲಿ ಗುರುವಾರ ಹಲ್ಲಿ ಬಿದ್ದಿದ್ದ ಬಿಸಿಯೂಟ ಸೇವಿಸಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥ ಗೊಂಡ ಘಟನೆ ಜರುಗಿದೆ. ಶಾಲೆ ಮುಗಿಸಿ ವಿದ್ಯಾರ್ಥಿಗಳು ಮನೆಗೆ ಬರುತ್ತಿದ್ದಂತೆ ಸುಸ್ತಾಗಿದ್ದನ್ನು ಗಮನಿಸಿ ಕೇಳಿದಾಗ ವಿದ್ಯಾರ್ಥಿಗಳು ಪಾಲಕರ ಬಳಿ ಹೇಳಿದ್ದಾರೆ, ಮಧ್ಯಾಹ್ನ ಶಾಲೆಯಲ್ಲಿ ಶಿಕ್ಷಕರು ಗದರಿಸಿ ಮನೆಯಲ್ಲಿ ಹೇಳದಂತೆ ಸೂಚನೆ ನೀಡಿದ್ದಾರೆ ಎಂದು ವಿದ್ಯಾರ್ಥಿಗಳು ಪಾಲಕರ ಬಳಿ ಹೇಳಿಕೊಂಡಿದ್ದಾರೆ.

ಗ್ರಾಮಕ್ಕೆ ವಜ್ರಬಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರ ತಂಡ ಭೇಟಿ ನೀಡಿ ವಿದ್ಯಾರ್ಥಿಗಳ ಆರೋಗ್ಯ ಪರಿಶೀಲನೆ ನಡೆಸಿದ್ದಾರೆ. ತೀವ್ರ ಹೊಟ್ಟೆ ನೋವು, ವಾಂತಿ, ಭೇದಿ ಕಾಣಿಸಿಕೊಂಡ 25 ವಿದ್ಯಾರ್ಥಿಗಳನ್ನು ಆಂಬುಲೆನ್ಸ್ ಮೂಲಕ ಯಲಬುರ್ಗಾ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.

ಸ್ಥಳಕ್ಕೆ ಅಕ್ಷರ ದಾಸೋಹ ಅಧಿಕಾರಿ, ಬಿಆರ್ ಸಿ ಗಳು ಭೇಟಿ ನೀಡಿ ಪರಿಶೀಲಿಸಿದ್ದಾರೆ.

**ಗ್ರಾಮಸ್ಥರ ಆಕ್ರೋಶ:** ಗ್ರಾಮದ ಮಕ್ಕಳು ಅಸ್ವಸ್ಥ ಗೊಂಡಿದ್ದಕ್ಕೆ ಗ್ರಾಮಸ್ಥರು, ಪಾಲಕರು ಶಿಕ್ಷಕರ ಮೇಲೆ ಅಡುಗೆ ಸಿಬ್ಬಂದಿ ಮೇಲೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾತ್ರಿ 10 ಗಂಟೆಯಾದರೂ ಮುಖ್ಯಶಿಕ್ಷಕ ಗ್ರಾಮಕ್ಕೆ ಬರದೇ, ಫೋನ್ ರಿಸಿವ್ ಮಾಡದೇ ಇರುವುದು ಜನತೆಯ ಆಕ್ರೋಶಕ್ಕೆ ಕಾರಣಾವಾಗಿತ್ತು.

## ಆಹಾರ ಸುರಕ್ಷತಾ ಅಧಿಕಾರಿಗಳಿಂದ ಪರಿಶೀಲನೆ

**■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಪಟ್ಟಣದಲ್ಲಿನ ಕಿರಾಣಿ, ಹೋಟೆಲ್, ಬೇಕರಿ ಇತರೇ ಆಹಾರ ಪದಾರ್ಥ ಮಾರಾಟದ ಅಂಗಡಿಗಳಿಗೆ ಶುಕ್ರವಾರ ತಾಲೂಕಾ ಆಹಾರ ಸುರಕ್ಷತಾ ಮತ್ತು ತಾಲೂಕಾ ವೈದ್ಯಾಧಿಕಾರಿ ಡಾ. ಸುಭಾಸ್ ದಾಯಗೊಂಡ ಭೇಟಿ ನೀಡಿ ಪರಿಶೀಲಿಸಿದರು.



ಲಕ್ಮೇಶ್ವರ ಪಟ್ಟಣದ ಕಿರಾಣಿ ಅಂಗಡಿಗಳಲ್ಲಿ ಕಳಪೆ ಉಪ್ಪು ಮಾರಾಟವಾಗುತ್ತಿದೆ ಮತ್ತು ಹೋಟೆಲ್, ಬೇಕರಿಗಳಲ್ಲಿನ ಪದಾರ್ಥಗಳ ಗುಣಮಟ್ಟ ಮತ್ತು ಸ್ವಚ್ಛತೆಯ ಬಗ್ಗೆ ಸಾರ್ವಜನಿಕರು ಮತ್ತು ಸಾಮಾಜಿಕ ಮಾಧ್ಯಮಗಳಿಂದ ಬಂದ ದೂರುಗಳನ್ನು ಆಧರಿಸಿ ಡಾ. ಸುಭಾಸ್ ದಾಯಗೊಂಡ ಸಿಬ್ಬಂದಿಗಳೊಡಗೂಡಿ ವಿವಿಧ ಅಂಗಡಿಗಳಿಗೆ ಭೇಟಿ ನೀಡಿ ಗುಣಮಟ್ಟ, ಸುರಕ್ಷತೆ, ಸ್ವಚ್ಛತೆ ಪರಿಶೀಲಿಸಿ ನಿಯಮ ಪಾಲಿಸದ ವ್ಯಾಪಾರಸ್ಥರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರಲ್ಲದೆ, ಕೆಲವರಿಗೆ ನೋಟೀಸ್ ಕೊಟ್ಟರು. ಈ ವೇಳೆ ಮಾತನಾಡಿದ ಅವರು, ಪಟ್ಟಣದಲ್ಲಿ ಎಗ್‌ರೈಸ್ ಅಂಗಡಿಗಳ ಸಂಖ್ಯೆ ಹೆಚ್ಚಿವೆ. ಇಲ್ಲಿ ಯಥೇಚ್ಚವಾಗಿ ಅಜಿನೋಮೋಟೋ, ಕೃತಕ ಬಣ್ಣ, ಟೇಸ್ಟಿಂಗ್ ಪೌಡರ್ ಬಳಸಲಾಗುತ್ತಿದೆ. ಕಿರಾಣಿ ಅಂಗಡಿಗಳಲ್ಲಿ ಕಲಬೆರಕೆ ಮತ್ತು ಗುಣಮಟ್ಟವಿಲ್ಲದ ಉಪ್ಪಿನ ಪ್ಯಾಕೆಟ್ ಮತ್ತು ಧಾನ್ಯಗಳು ಸಹಿತ ಅಹಾರ ಪದಾರ್ಥಗಳ ಮಾರಾಟವಾಗುತ್ತಿದೆ ಎಂಬ ಮಾಹಿತಿ ಬಂದ ಹಿನ್ನೆಲೆಯಲ್ಲಿ ಭೇಟಿ ನೀಡಲಾಗುತ್ತಿದೆ. ಉಪ್ಪು ಸೇರಿ ಸಂಶಯಾಸ್ಪದ ಆಹಾರ ಪದಾರ್ಥಗಳ ಸ್ಯಾಂಪಲ್ ಪಡೆದುಕೊಂಡಿದ್ದು, ಪರೀಕ್ಷೆಗೊಳಪಡಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಭೇಟಿಯ ವೇಳೆ ಅನೇಕರು ಲೈಸನ್ಸ್, ಲೇಬಲ್ ಇಲ್ಲದೇ ವ್ಯಾಪಾರ ಮಾಡುತ್ತಿರುವುದು, ಸ್ವಚ್ಛತೆ ಕಾಪಾಡದಿರುವುದು ಕಂಡುಬಂದಿದೆ.

ಎಲ್ಲ ಬಗೆಯ ವ್ಯಾಪಾರಸ್ಥರು ಎಚ್ಚೆತ್ತುಕೊಳ್ಳಬೇಕು. ಇಲ್ಲದಿದ್ದರೆ ಧಿಡೀರ್ ದಾಳಿ ಮಾಡಿ ದಂಡ ವಿಧಿಸಲಾಗುವುದು ಮತ್ತು ಲೈಸನ್ಸ್ ರದ್ದುಪಡಿಸಲಾಗುವುದು ಎಂದು ಹೇಳಿದರು. ಈ ವೇಳೆ ವೈದ್ಯರಾದ ಪ್ರವೀಣ ಫಾಯದೆ, ದತ್ತುಕುಮಾರ, ಗಣೇಶ, ರವಿ ಕೊಪ್ಪದ ಇದ್ದರು.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1318 ದಿನಾಂಕ: 29.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಅಬ್ದುಲ ಅಜೀಜ ಅಬ್ದುಲ ಕರೀಮಸಾಬ ನರಗುಂದ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)**ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಕಳಸಾಪೂರ | 231/*/2 | 01ಎಕರೆ-31ಗುಂಟೆ 07ಆಣೆ | ವಸತಿ | ವಾಣಿಜ್ಯ (ಮಳಿಗೆ) |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/595/ದೇಶಪಾಂಡೆಪಬ್ಲಿಸಿಟಿ/2025-26



**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1320 ದಿನಾಂಕ: 29.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಮಹ್ಮದಜಿಕರಿಯಾ ಮಹ್ಮದಗೌಸ ನರಗುಂದ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)**ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಕಳಸಾಪೂರ | 231/*/4 | 02ಎಕರೆ-28ಗುಂಟೆ 10ಆಣೆ | ವಸತಿ | ವಾಣಿಜ್ಯ (ಮಳಿಗೆ) |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/600/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka